# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 56 | WEDNESDAY 06-05-2026 | PRGI No : KNKAN/26/A0962 | Pages:4 | Rs.2.00 | M: 9742418836

## ಪಶ್ಚಿಮ ಬಂಗಾಳದಲ್ಲಿ TMC ಸೋತಂತೆ ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್ ಧೂಳೀಪಟ: ಬಿ.ಎಸ್ ಯಡಿಯೂರಪ್ಪ



ಬೆಂಗಳೂರು: ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ಧೂಳೀಪಟವಾದಂತೆ ರಾಜ್ಯದಲ್ಲೂ ಕಾಂಗ್ರೆಸ್ ಮುಂದಿನ ಚುನಾವಣೆಯಲ್ಲಿ ನೆಲಕಚ್ಚಲಿದೆ. ಕಾಂಗ್ರೆಸ್‌ಗೆ ಯಾವುದೇ ಭವಿಷ್ಯ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಒಂದೆರಡು ಸ್ಥಾನಗಳನ್ನೂ ಗೆಲ್ಲಲೂ ಆಗದ ಕಾಂಗ್ರೆಸ್‌ಗೆ ಬಿಜೆಪಿ ಬಗ್ಗೆ ಮಾತನಾಡುವ ನೈತಿಕ ಹಕ್ಕಿಲ್ಲ. ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಜನತೆಯ ದೃಢವಿಶ್ವಾಸವನ್ನು ಮತ್ತೊಮ್ಮೆ ದೃಢಪಡಿಸಿದೆ.

ಇದೊಂದು ಐತಿಹಾಸಿಕ ಫಲಿತಾಂಶ. ಇದಕ್ಕಾಗಿ ಗೃಹ ಸಚಿವ ಅಮಿತ್ ಶಾ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾದ ನಿತಿನ್ ನವೀನ್ ಅವರು ನಿರಂತರ ಮಾರ್ಗದರ್ಶನ ನೀಡಿದ್ದಾರೆ ಮತ್ತು ಪಕ್ಷವನ್ನು ಸೂಕ್ತವಾಗಿ ಮುನ್ನಡೆಸಿದ್ದಾರೆ ಎಂದರು. ಮತದಾರರು ಅಭಿವೃದ್ಧಿಗಾಗಿ ಎನ್‌ಡಿಎಯ ಬದ್ಧತೆ ಮತ್ತು "ವಿಕ್ಷಿತ ಭಾರತ" ನಿರ್ಮಿಸುವ ದೃಷ್ಟಿಕೋನವನ್ನು ಆಶೀರ್ವದಿಸಿದ್ದಾರೆ.

ಉಚಿತ ಗ್ಯಾರಂಟಿ ಭರವಸೆಗಳಿಂದ ಜನರನ್ನು ದೀರ್ಘಕಾಲ ದಾರಿತಪ್ಪಿಸಲು ಸಾಧ್ಯವಿಲ್ಲ ಎಂದು ವಿಧಾನಸಭಾ ಚುನಾವಣಾ ಫಲಿತಾಂಶಗಳು ಸಾಬೀತುಪಡಿಸುತ್ತವೆ ಎಂದು ಅವರು ಹೇಳಿದರು. ಉಪಚುನಾವಣೆಗಳಲ್ಲಿನ ಸೋಲು ನೋವು ತಂದಿದ್ದು, ಮುಂದಿನ ದಿನಗಳಲ್ಲಿ ಪಕ್ಷ ಸಂಘಟನೆಗೆ ಪ್ರವಾಸ ಮಾಡುತ್ತೇನೆ ಎಂದು ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ತಿಳಿಸಿದ್ದಾರೆ.

# ವೋಟ್ ಚೋರಿ ಅಲ್ಲ, ಬಿಜೆಪಿಯಿಂದ ವೋಟ್ ಡಕಾಯಿತಿ: ಶೃಂಗೇರಿ ಕ್ಷೇತ್ರದ ಮರು ಎಣಿಕೆ ಬಗ್ಗೆ ಸಿದ್ದರಾಮಯ್ಯ ವ್ಯಂಗ್ಯ

ಬೆಂಗಳೂರು: ಶೃಂಗೇರಿಯಲ್ಲಿ ನಡೆದ ಅಂಚೆ ಮತಗಳ ಮರು ಎಣಿಕೆಯಲ್ಲಿ ಬಿಜೆಪಿಯವರು ಕ್ರಿಮಿನಲ್ ಪಿತೂರಿ ಮಾಡಿ ವೋಟ್ ಚೋರಿ ಮಾಡಿದ್ದಾರೆ ಎಂದು ಖುದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗಂಭೀರ ಆರೋಪ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಇದು ಓಟ್ ಚೋರಿ ಅಲ್ಲ. ಓಟ್ ಡಕಾಯಿತಿ' ಎಂದು ಆರೋಪಿಸಿದರು. ಶೃಂಗೇರಿ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಟಿ.ಡಿ. ರಾಜೇಗೌಡ ಅವರಿಗೆ ಬಂದಿದ್ದ ಮತಗಳು ಅಮಾನ್ಯ ಆಗಿವೆ. ಇಡೀ ದೇಶದಲ್ಲೇ ಇಂತಹ ಕ್ರಿಮಿನಲ್ ಚಟುವಟಿಕೆ ಎಲ್ಲೂ ನಡೆದಿಲ್ಲ. ಈ ಬಗ್ಗೆ ತನಿಖೆ ನಡೆದು ಸತ್ಯ ಹೊರಬರಬೇಕು' ಎಂದು ಅವರು ಆಗ್ರಹಿಸಿದರು.

ಅಂಚೆ ಮತಗಳನ್ನು ಅಮಾನ್ಯ ಮಾಡುವಂತೆ ಜಿಲ್ಲಾಧಿಕಾರಿ, ಚುನಾವಣಾಧಿಕಾರಿಯ ಮೇಲೆ ಕೇಂದ್ರದಿಂದ ಒತ್ತಡ ಇರಬಹುದು. ಯಾರೇ ಅಧಿಕಾರಿಗಳು ಇರಲಿ, ತಪ್ಪು ಮಾಡಿದ್ದರೆ ಶಿಕ್ಷೆ ಆಗಬೇಕು ಎಂದರು.



ಶೃಂಗೇರಿ ಕ್ಷೇತ್ರದ ಅಂಚೆ ಮತಗಳ ಮರುಎಣಿಕೆ ನ್ಯಾಯಾಲಯದ ಆದೇಶದಂತೆ ನಡೆದಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ರಾಜೇಗೌಡ 201 ಮತಗಳ ಅಂತರದಿಂದ ಗೆದ್ದಿದ್ದರು. ರಾಜೇಗೌಡಗೆ 59.170 ಮತಗಳು ಬಂದಿದ್ದವು, ಎದುರಾಳಿ ಜೀವರಾಜ್ ಗೆ 58,970 ಮತಗಳು ಬಂದಿತ್ತು.

ಚುನಾವಣಾ ಏಜೆಂಟರು, ರಿಟರ್ನಿಂಗ್ ಆಫೀಸರ್ ಗಳು ಸಹಿ ಮಾಡಿ ಫಲಿತಾಂಶ ಘೋಷಣೆ ಮಾಡಿದ್ದರು. ನಂತರ ಬಿಜೆಪಿ ಅಭ್ಯರ್ಥಿ ಜೀವರಾಜ್ ಅವರು ಮರು ಎಣಿಕೆ ಮಾಡಬೇಕೆಂದು ಹೈಕೋರ್ಟ್ ಗೆ ಹೋಗಿದ್ದರು. ಅಂಚೆ ಮತಗಳ ಮರುಎಣಿಕೆ ಮಾಡಿ ಲೋಪ ಆಗಿದ್ದರೆ ಪತ್ತೆ ಹಚ್ಚುವಂತೆ ಕೋರ್ಟ್ ಸೂಚಿಸಿತ್ತು.

ಕೋರ್ಟ್ ಆದೇಶದಂತೆ ಮರು ಎಣಿಕೆ ನಡೆಯಿತು. ಅಂಚೆ ಮತಗಳ ಮರುಎಣಿಕೆಯಲ್ಲಿ ರಾಜೇಗೌಡಗೆ ಲಭಿಸಿದ್ದ 250 ಮತಗಳು ಅಮಾನ್ಯವಾಗಿವೆ. ಇದು ಹೇಗೆ ಅಮಾನ್ಯ ಆಗುತ್ತದೆ? ಇದನ್ನು ನೋಡಿದಾಗ ಬಿಜೆಪಿಯವರು ಓಟ್ ಚೋರಿ ಮಾಡಿರುವುದು ಸ್ಪಷ್ಟವಾಗಿ ಗೊತ್ತಾಗುತ್ತೆ' ಎಂದರು.

ಸಂವಿಧಾನದ ಮೇಲೆ ನಂಬಿಕೆ ಇಲ್ಲದವರು ಬಿಜೆಪಿಯವರು. ಹೀಗಾಗಿ ಅಪರಾಧಗಳನ್ನು ಮಾಡಲು ಹಿಂದೆ ಮುಂದೆ ನೋಡೋದಿಲ್ಲ. ಕೇಂದ್ರದ ಮಂತ್ರಿಗಳು, ವಿರೋಧ ಪಕ್ಷಗಳ ನಾಯಕರು ಸಮರ್ಥನೆ ಮಾಡಿಕೊಳ್ಳೋದ್ರಲ್ಲಿ ಅರ್ಥ ಇಲ್ಲ. ಮುಂದೆ ಜನರೇ ಇವರಿಗೆ ಪಾಠ ಕಲಿಸುತ್ತಾರೆ.

ಇದನ್ನ ಫಾರೆನ್ಸಿಕ್ ಗೆ ಕಳುಹಿಸಬೇಕಿದೆ, ಇದು ಗೊತ್ತಿದ್ದು ಘೋಷಣೆ ಮಾಡಿದ್ದಾರೆ' ಎಂದರು.

ರಾಜೇಗೌಡ ದೂರು ಕೊಟ್ಟಿದ್ದಾರೆ, ಎಆರ್ ಆಗಿದೆ. ನ್ಯಾಯಾಲಯಕ್ಕೂ ಹೋಗಿದ್ದಾರೆ. ಚುನಾವಣಾ ಅಬ್ಸರ್ವರ್ ಕ್ಲಿಯರೆನ್ಸ್ ಕೊಟ್ಟ ಮೇಲೆಯೇ ಘೋಷಣೆ ಮಾಡಬೇಕು. ಇವರು ಕೇಳದೆಯೇ ಫಲಿತಾಂಶ ಘೋಷಿಸಿದ್ದಾರೆ.

ಇದನ್ನು ಆತುರಾತುರವಾಗಿ ಘೋಷಣೆ ಮಾಡಿರೋದು ಸರಿಯಲ್ಲ. ಇದನ್ನು ಕೋರ್ಟ್ ನಲ್ಲಿ ಪ್ರಶ್ನಿಸುತ್ತೇವೆ. ನಾವು ಕ್ರಿಮಿನಲ್ ಕೇಸ್ ಹಾಕಿದ್ದೇವೆ, ನಿಷ್ಪಕ್ಷಪಾತವಾಗಿ ತನಿಖೆ ನಡೆಯಬೇಕು ಎಂದರು.

## ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಧಾರವಾಡ ಗ್ರಾಮೀಣ ತಾಲೂಕು ಉತ್ತಮ ಸಾಧನೆ



**ಬೆಳಗಾವಿ ವಾರ್ತೆ ಧಾರವಾಡ ಗ್ರಾಮೀಣ :** ವಿದ್ಯಾರ್ಥಿ ಗಳು ತಮ್ಮಲ್ಲಿರುವ ಸುಪ್ತ ಪ್ರತಿಭೆಯನ್ನು ಅವಕಾಶ ಸಿಕ್ಕಾಗ ಬಳಸಿಕೊಂಡು ಸಾಧನೆ ಮಾಡಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ ಹೇಳಿದರು.

ಅವರು ಧಾರವಾಡ ಗ್ರಾಮೀಣ ತಾಲೂಕಿನಲ್ಲಿ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಬಿಆರಸಿಯಲ್ಲಿ ಏರ್ಪಡಿಸಿದ್ದ ಸನ್ಮಾನ ಕಾರ್ಯಕ್ರಮ ಉದ್ದೇಶಿಸಿ ಮಾತನಾಡುತ್ತಾ ವಿದ್ಯಾರ್ಥಿಗಳು ಏಕಾಗ್ರತೆಯಿಂದ ಸಮಯಕ್ಕೆ ಮಹತ್ವ ನೀಡಿ ಸತತ ಪರಿಶ್ರಮದಿಂದ ಅಭ್ಯಾಸ ಮಾಡಿ ತಾಲೂಕಿಗೆ ಕೀರ್ತಿ ತಂದಿದ್ದಿರಿ ನಿಮಗೆ ಅಭಿನಂದನೆಗಳು ಎಂದರು.

ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇಕಡಾ 97.23 % ಫಲಿತಾಂಶದೊಂದಿಗೆ ಧಾರವಾಡ ಗ್ರಾಮೀಣ ತಾಲೂಕು ಉತ್ತಮ ಸಾಧನೆ ಮಾಡಿದೆ. ಈ ನಿಮಿತ್ತ ಧಾರವಾಡ ಗ್ರಾಮೀಣ ಕಚೇರಿಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ರಾಮಕೃಷ್ಣ ಸದಲಗಿ ಅವರಿಗೆ ತಾಲೂಕಿನ ಎಲ್ಲರ ಪರವಾಗಿ ಸನ್ಮಾನಿಸಲಾಯಿತು. 2025-26 ನೇ ಸಾಲಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ರಾಮಕೃಷ್ಣ ಸದಲಗಿ ಇವರು ಉತ್ತಮ ಫಲಿತಾಂಶಕ್ಕೆ ಕೈಗೊಂಡ ಕ್ರಮಗಳು;

ವಿಶೇಷ ತರಗತಿಗಳ ನಿರ್ವಹಣೆ, ವಿದ್ಯಾರ್ಥಿಗಳ ಮನೆ ಭೇಟಿ, ವಿಷಯ ಶಿಕ್ಷಕರ ಕಾರ್ಯಾಗಾರಗಳು, ವ್ಯಕ್ತಿತ್ವ ವಿಕಸನ ಶಿಬಿರಗಳು, 40+ ಪಾಸಿಂಗ್ ಪ್ಯಾಕೇಜ್, ಎಲ್‌ಬಿಎ ಆಧಾರಿತ ಸ್ಕೋರಿಂಗ್ ಪ್ಯಾಕೇಜ್ ತರಗತಿಗಳು, ಸಕಾಲದಲ್ಲಿ ಪಠ್ಯ ಬೋಧನೆ ಪೂರ್ಣಗೊಳಿಸುವುದು, ಸಂಪನ್ಮೂಲ ವ್ಯಕ್ತಿಗಳ ಸದ್ಬಳಕೆ, ಪ್ರತಿ ಶನಿವಾರ ಮುಖ್ಯೋಪಾಧ್ಯಾಯರಿಗೆ ಗೂಗಲ್ ಸಭೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಕಡ್ಡಾಯವಾಗಿ ತಂಡ ರಚಿಸಿ ತಾವೇ ಶಾಲೆಗೆ ಭೇಟಿ ನೀಡಿ ಮಾರ್ಗದರ್ಶನ ಮಾಡಿದರು. ದೈಹಿಕ ಶಿಕ್ಷಣ ಪರಿವೀಕ್ಷಕರ, ಕ್ಷೇತ್ರ ಸಮನ್ವಾಧಿಕಾರಿಗಳ, ತಾಲೂಕಾ ಎಸ್.ಎಸ್.ಎಲ್.ಸಿ ಪರೀಕ್ಷಾ ನೊಡಲ್, ಶಿಕ್ಷಣ ಸಂಯೋಜಕರ, ಬಿಆರಸಿ ಕಛೇರಿ ಅವರ ತಂಡದೊಂದಿಗೆ ಮುಖ್ಯೋಪಾಧ್ಯಾಯರ ನಿರ್ದೇಶನದಂತೆ ಶಿಕ್ಷಕರು ವಾಟ್ಸಪ್ ಗುಂಪು ರಚಿಸಿ,ಮಕ್ಕಳಿಗೆ ಕರೆ ಮೂಲಕ ವಿಷಯಗಳನ್ನು ಚರ್ಚಿಸಲು ತಿಳಿಸಲಾಯಿತು. ಈ ಮೂಲಕ ಮಕ್ಕಳ ಕಲಿಕೆಯಲ್ಲಿ ನಿರಂತರತೆಯನ್ನು ಕಾಯ್ದುಕೊಳ್ಳಲಾಯಿತು. ಯಾವ ಮಕ್ಕಳಿಗೂ ಏನೂ ತೊಂದರೆ ಆಗದೆ ಪರೀಕ್ಷೆ ನಡೆಸುವುದು, ಜೊತೆಗೆ ಮಕ್ಕಳಲ್ಲಿ ಆತ್ಮವಿಶ್ವಾಸ ತುಂಬಿ ಉತ್ತಮ ಸಾಧನೆ ಮಾಡಲು ಪ್ರೇರೆಪಣೆ ನೀಡಲಾಯಿತು. ಜನಪ್ರತಿನಿಧಿಗಳು, ಮುಖ್ಯಾಧ್ಯಾಪಕರ, ಸಹ-ಶಿಕ್ಷಕ ಹಾಗೂ ನೌಕರರ ಸಂಘಟನೆ ಸಹಕಾರದೊಂದಿಗೆ ತಾಲೂಕು ಈ ಬಾರಿ 97.23 % ಫಲಿತಾಂಶ ಪಡೆದು ಜಿಲ್ಲೆಯಲ್ಲಿ ಉತ್ತಮ ಸ್ಥಾನ ಪಡೆಯಿತು.ಹೀಗೆ ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸಿ ತಾಲೂಕಿನ ಎಲ್ಲಾ ಮಕ್ಕಳು ಚೆನ್ನಾಗಿ ಓದಿ ಪರೀಕ್ಷೆಗೆ ಸಿದ್ದಗೊಳಿಸಿದ ಇವರ ಪಾತ್ರ ಮಹತ್ವದಾಗಿದೆ.

ಹೆಚ್ಚು ಅಂಕಗಳಿಸಿದ ಪ್ರತಿಭಾವಂತ ವಿದ್ಯಾರ್ಥಿನಿ ಶ್ರೀರಕ್ಷಾ ಗೂಳಪ್ಪ ಬಡಿಗೇರ(619) ಮಾತನಾಡುತ್ತಾ ಜೀವನದಲ್ಲಿ ಉನ್ನತ ಸಾಧನೆ ಮಾಡಬೇಕಾದರೆ ಮುಂದೆ ಮಾಡುವ ಕೆಲಸದ ಬಗ್ಗೆ ಸ್ಪಷ್ಟ ಗುರಿ ಹೊಂದಿರಬೇಕು. ಆಗ ಮಾತ್ರ ಉನ್ನತ ಸಾಧನೆ ಮಾಡಲು ಸಾಧ್ಯ. ನಾನು ಸಾಧನೆ ಮಾಡಲು ಇದೆ ಕಾರಣ ಎಂದು ಹೇಳಿದಳು.

2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಾದ ಶ್ರೀರಕ್ಷಾ ಗೂಳಪ್ಪ ಬಡಿಗೇರ(619), ಶ್ರೀನಿಧಿ ಆನಂದ ಪಾಟೀಲ (619), ಶ್ರೀಧರ ಸೂರ್ಯವಂಶಿ(618), ಜ್ಯೋತಿ ರುದ್ರಪ್ಪ ಹಜೇರಿ(616), ವೈಷ್ಣವಿ ರಾಜೇಶ ಹವಾನಿ(616),ಮಹಾಲಕ್ಷ್ಮೀ ಸಂತೋಷ ಗಿರಿಯಪ್ಪನವರ(616),ಕಾವ್ಯಾ ಬಸಪ್ಪ ಸಾಲಗಟ್ಟಿ(618) ಇವರಿಗೆ ತಾಲೂಕಿನ ಪರವಾಗಿ ಸನ್ಮಾನಿಸಲಾಯಿತು.

ದೈಹಿಕ ಶಿಕ್ಷಣ ಪರಿವೀಕ್ಷಕರಾದ ಈಶ್ವರ ಆಯಟ್ಟಿ, ಕೇತ್ರ ಸಮನ್ವಯಾಧಿಕಾರಿ ಕುಮಾರ ಕೆ. ಎಫ್. ತಾಲೂಕ ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿಯಾದ ಸಿ ಎಮ ಲಾಳನವರ, ಶಿಕ್ಷಣ ಸಂಯೊಜಕರು, ಬಿಆರ್‌ಪಿಗಳು, ತಾಲೂಕಿನಿಂದ ಆಗಮಿಸಿದ ವಿವಿಧ ಶಾಲೆಯ ವಿದ್ಯಾರ್ಥಿಗಳು, ಪಾಲಕರು, ಮುಖ್ಯಾಧ್ಯಾಪಕರು, ಶಿಕ್ಷಕರು ಉಪಸ್ಥಿತರಿದ್ದರು.

## ಬಂಗಾರದ ಆಭರಣ ಕಳ್ಳತನ: ಆರೋಪಿ ಬಂಧನ

**ಬೆಳಗಾವಿ ವಾರ್ತೆ ಲಕ್ಷೇಶ್ವರ:** ಏಪ್ರಿಲ್ 10ರಂದು ಪಟ್ಟಣದ ಬಸ್ ನಿಲ್ದಾಣದಲ್ಲಿ ಬಂಗಾರದ ಆಭರಣ ಕಳ್ಳತನ,ಹಾಗೂ ಏಪ್ರಿಲ್ 25ರಂದು ಬಸ್ ನಿಲ್ದಾಣದಲ್ಲಿ ಹಣ ಕದ್ದ ಆರೋಪದಡಿಯಲ್ಲಿ ಮಹಾರಾಷ್ಟ್ರದ ಪಾಂಗರಮಲ್ ಗ್ರಾಮದ ರಾಜವೀರ ಕಾಳೆ ಎಂಬ ಕಳ್ಳನನ್ನು ಬಂದಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಆರೋಪಿ ಕಡೆಯಿಂದ ಬಂಗಾರದ ಆಭರಣ, ಹಾಗೂ ನಗದು ವಶಪಡಿಸಿಕೊಂಡಿದ್ದು,ಕೃತ್ಯಕ್ಕೆ ಬಳಸಿದ ಒಂದು ಮೋಟಾರ ಸೈಕಲ್ಲನ್ನು ವಶಪಡಿಸಿಕೊಂಡಿದ್ದಾರೆ,

ಆರೋಪಿಯ ಪತ್ತೆಗಾಗಿ ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ರೋಹನ ಜಗದೀಶ,ಡಿ ಎಸ್ ಪಿ ಉಪ ವಿಭಾಗ ಗದಗ ಇವರ ಮಾರ್ಗದರ್ಶನದಲ್ಲಿ ಶಿರಹಟ್ಟಿ



ಸಿಪಿಐ ಬಿ ವಿ ನ್ಯಾಮಗೌಡ, ಪಿ ಎಸ್ ಐ ನಾಗರಾಜ ಗಡದ, ಅಪರಾದ ವಿಭಾಗದ ಪಿ ಎಸ್ ಐ ಟಿ ಕೆ ರಾಠೋಡ ಇವರನ್ನೊಳಗೊಂಡ ತಂಡ ರಚಿಸಿ ಪತ್ತೆ ಕಾರ್ಯ ಕೈ ಗೊಂಡಿದ್ದರು. ಆರೋಪಿ ಪತ್ತೆಹಚ್ಚುವಲ್ಲಿ ಯಶಸ್ವಿಯಾದ ಪ್ರೋ ಪಿ ಎಸ್ ಐ ಪೂಜಾ ಪಾರ್ಥನಳ್ಳಿ, ಆನಂದಸಿಂಗ ದೊಡ್ಡಮನಿ, ಸಿಬ್ಬಂದಿಗಳಾದ ಡಿ ಎಸ್ ನದಾಫ, ಪಿ ಡಿ ಮ್ಯಾಗೇರಿ,ಎಚ್ ಐ ಕಲ್ಲಣ್ಣವರ,ಆರ್ ಎಸ್ ಯರಗಟ್ಟಿ,ಎಂ ಎ ಶೇಖ, ಎಂ ಎಸ್ ಬಳ್ಳಾರಿ, ಆನಂದ ಕಮ್ಮಾರ, ಸಿ ಎಸ್ ಮಠಪತಿ, ಎ ಎಲ್ ಕರ್ಜಗಿ, ಮದುಚಂದ್ರ ಧಾರವಾಡ, ಮಾತಾಂಡಪ್ಪ ಉಪ್ಪಾರ, ಎಸ್ ಡಿ ಭೂತಪ್ಪನವರ, ಹಾಗೂ ಗುರು ಬೂದಿಹಾಳ, ಸಂಜು ಕೊರಡೂರ ಅಪ್ಪಣ್ಣ ರಾಠೋಡ, ಇವರಗಳ ಕಾರ್ಯಕ್ಕೆ ಜಿಲ್ಲಾ ಎಸ್ ಪಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಮಕ್ಕಳಲ್ಲಿರುವ ಕಲೆಯನ್ನು ಗುರುತಿಸುವ ಕಾರ್ಯ ರಂಗಾಯಣ ಮಾಡಿದೆ: ಡಾ.ಬಸು ಬೇವಿನಗಿಡದ



**ಬೆಳಗಾವಿ ವಾರ್ತೆ ಧಾರವಾಡ:** ಇಂದಿನ ಆಧುನಿಕ ಜಗತ್ತಿನಲ್ಲಿ ಮಕ್ಕಳು ಕೇವಲ ಓದಿಗೆ ಅವಲಂಬಿತರಾಗಿರುವ ಮಕ್ಕಳ ಸಾಂಸ್ಕೃತಿಕ ಕಲೆಗಳನ್ನು ಗುರುತಿಸಿ, ರಂಗಾಯಣವು ಪ್ರೋತ್ಸಾಹ ನೀಡುತ್ತಿದೆ ಎಂದು ಸಾಹಿತಿಗಳಾದ ಡಾ. ಬಸು ಬೇವಿನಗಿಡದ ಅವರು ಹೇಳಿದರು.

ರಂಗಾಯಣ ಧಾರವಾಡವು ಪಂ.ಬಸವರಾಜ ರಾಜಗುರು ಬಯಲು ರಂಗಮಂದಿರದಲ್ಲಿ "ಅಭಿನಯ-ಅಭಿವ್ಯಕ್ತಿ" ಧ್ಯೇಯವಾಕ್ಯದಡಿ ಆಯೋಜಿಸಿದ್ದ "ಮಕ್ಕಳ ರಂಗ ತರಬೇತಿ ಶಿಬಿರದ ಸಮಾರೋಪ ಹಾಗೂ ಚಿಣ್ಣರ ನಾಟಕೋತ್ಸವ"ವ ಉದ್ಘಾಟಿಸಿ, ಅವರು ಮಾತನಾಡಿದರು. ರಂಗಭೂಮಿ ಎಂದರೆ ಸಾಹಿತ್ಯದ ಭಂಡಾರ. ಅದರಲ್ಲಿ ಅಭಿನಯ, ಅಕ್ಷರಗಳ ಉಚ್ಚಾರಣೆ, ಪದಗಳನ್ನು ಬಳಸುವ ಬಗೆ, ಭಾವವನ್ನು ವ್ಯಕ್ತಪಡಿಸುವ ವಿಧಾನ ಎಲ್ಲವೂ ಇದೆ. ಇಂತಹ ರಂಗಕಲೆಯನ್ನು ರೂಢಿಸಿಕೊಳ್ಳುವ ಮಕ್ಕಳು ಉತ್ತಮ ಜೀವನವನ್ನು ರೂಪಿಸಿಕೊಳ್ಳುತ್ತಾರೆ. ಮಕ್ಕಳಲ್ಲಿರುವ ಪ್ರತಿಭೆಗೆ ಪೂರಕ ವಾತಾವರಣವನ್ನು ನೀಡುವ ಕಾರ್ಯವನ್ನು ಪಾಲಕರು ಮಾಡಬೇಕು. ಅಂದಾಗ ಮಾತ್ರ ಮಕ್ಕಳು ಸಾಂಸ್ಕೃತಿಕ ಕ್ಷೇತ್ರದಲ್ಲಿ ಸಾಧನೆ ಮಾಡಲು ಸಾಧ್ಯ. ರಂಗಾಯಣವು ಈ ಶಿಬಿರದ ಮೂಲಕ ಮಕ್ಕಳ ನಾಟಕಗಳನ್ನು ಪ್ರೋತ್ಸಾಹಿಸುತ್ತಿದೆ ಎಂದರು.

ರಂಗಾಯಣ ನಿರ್ದೇಶಕರಾದ ಝುಕೀರ ನದಾಫ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಮಾತನಾಡಿ, ರಂಗಭೂಮಿಯು ಪರಿಣಾಮಕಾರಿಯಾಗಿ ಪ್ರಭಾವ ಬೀರುವ ಮಾಧ್ಯಮವಾಗಿದೆ. ಇಲ್ಲಿ ನೀಡುವ ತರಬೇತಿ, ಚಟುವಟಿಕೆಗಳು ಕೇವಲ ಜೀವನವನ್ನು ರೂಪಿಸುವುದಲ್ಲದೆ ಮಕ್ಕಳಿಗೆ ಉತ್ತಮ ಸಂಸ್ಕಾರವನ್ನು ನೀಡುತ್ತದೆ. ಆದ್ದರಿಂದ ಮಕ್ಕಳಿಗೆ ರಂಗಭೂಮಿಯಲ್ಲಿ ತೊಡಗಿಸಿಕೊಳ್ಳಲು ಪಾಲಕರು ಉತ್ತೇಜನ ನೀಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಚಿಣ್ಣರಮೇಳದ ಕಿರುಹೊತ್ತಿಗೆಯನ್ನು ಬಿಡುಗಡೆಗೊಳಿಸಲಾಯಿತು. ರಂಗಾಯಣ ಆಡಳಿತಾಧಿಕಾರಿಗಳಾದ ಶಶಿಕಲಾ ಹುಡೇದ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಚಿಣ್ಣರಮೇಳದ ಸಂಚಾಲಕರಾದ ಅರುಣಕುಮಾರ ಮೇದಾರ, ತರಬೇತುದಾರರಾದ ರಾಜ್ ಕವಡೆನವರ, ಸಂಗೀತಗಾರರಾದ ಸುನಂದಾ ನಿಂಬನಗೌಡರ ಅವರು ಉಪಸ್ಥಿತರಿದ್ದರು. ನಂತರ ವಾಚಿಕ ತಂಡ ಕುಣಿಯೋನು ಬಾರ, ಆಹಾರ್ಯ ತಂಡ ಹಾರೋಣ ಬಾ ಸಮೂಹ ನೃತ್ಯಗಳನ್ನು ಹಾಗೂ "ಕೆಂಪು ಹೂ" ನಾಟಕವನ್ನು ಆಂಗಿಕ ತಂಡ, "ಸಾಯೋ ಆಟ" ನಾಟಕವನ್ನು ಸಾತ್ವಿಕ ತಂಡ ಪ್ರಸ್ತುತಪಡಿಸಿದರು. ನಾಟಕಗಳನ್ನು ಪ್ರದರ್ಶಿಸಿದ ಚಿಣ್ಣರರಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು. ಕೀರ್ತಿ ಸಿಂದೋಗಿ ಹಾಗೂ ಸುನೀಲ ಬೆಳಗಾವಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.



# 2026ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳು ಹಾಗೂ ವಸತಿ ಶಾಲೆ ವಿದ್ಯಾರ್ಥಿಗಳ ಅತ್ಯುತ್ತಮ ಸಾಧನೆ



**ಬೆಳಗಾವಿ ವಾರ್ತೆ ಗದಗ:** ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಗದಗ ಅಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ವಸತಿ ನಿಲಯಗಳ ಹಾಗೂ ವಸತಿ ಶಾಲೆಯ ವಿದ್ಯಾರ್ಥಿಗಳು 2025–26ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡುವ ಮೂಲಕ ಇಲಾಖೆಗೆ ಕೀರ್ತಿ ತಂದಿದ್ದಾರೆ.

2026ನೇ ಸಾಲಿನಲ್ಲಿ ಎಸ್‌ಎಸ್.ಎಲ್‌ಸಿ ಪರೀಕ್ಷೆಯಲ್ಲಿ ಒಟ್ಟು 408 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 16 ವಿದ್ಯಾರ್ಥಿಗಳು ಶೇ: 85% ಕಿಂತಲೂ ಹೆಚ್ಚು ಅಂಕಪಡೆದು ಡಿಸ್ಟಿಂಕ್ಷನ್‌ನಲ್ಲಿ ಉತ್ತೀರ್ಣರಾಗಿದ್ದಾರೆ. 203 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ, 108 ವಿದ್ಯಾರ್ಥಿಗಳು ದ್ವಿತಿಯ ದರ್ಜೆಯಲ್ಲಿ ಹಾಗೂ 60 ವಿದ್ಯಾರ್ಥಿಗಳು ತೃತೀಯ ದಜೇಯಲ್ಲಿ ಒಟ್ಟು 387 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಜಿಲ್ಲೆಯ ವಸತಿ ನಿಲಯಗಳ ಒಟ್ಟು ಶೇ ಪ್ರಮಾಣ 94.85. ಹಾಗೂ ಪರಿಶಿಷ್ಟ ಪಂಗಡದ ನಿಲಯಗಳಲ್ಲಿ 24 ನಿಲಯದ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು 23 ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದು ಶೇ 95.83 ರಷ್ಟು ಫಲಿತಾಂಶ ದಾಖಲಿಸಿದೆ.

ಇಲಾಖೆಯ ಅಧೀನದಲ್ಲಿರುವ 13 ವಸತಿ ಶಾಲೆಗಳಲ್ಲಿ (ಕ್ರೈಸ್) 539 ವಿದ್ಯಾರ್ಥಿಗಳಲ್ಲಿ, 206 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ನಲ್ಲಿ, 284 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ, ವಿದ್ಯಾರ್ಥಿಗಳು ತೇರ್ಗಡೆ ಹೊಂದಿರುತ್ತಾರೆ. 12 ವಸತಿ ಶಾಲೆಗಳಲ್ಲಿ ಶೇ 100 ರಷ್ಟು ಪಲಿತಾಂಶ ದಾಖಲಾಗಿವೆ. ಜಿಲ್ಲೆಗೆ ಪ್ರತಿಶತ್ 99.86 ರಷ್ಟು ಫಲಿತಾಂಶ ದಾಖಲಾಗಿದೆ.

ವಸತಿ ಶಾಲೆಯಾದ ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿಯಾದ ಕುಮಾರಿ ಸುಷ್ಮಾ ತಾವರೇಪ್ಪ ನಾಯಕ, ಈ ವಿದ್ಯಾರ್ಥಿ 2026ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ 625 ಅಂಕಗಳಿಗೆ 620 ಅಂಕಗಳನ್ನು ಗಳಿಸಿ, ಶೇ 99.20 ಪ್ರತಿಶತ ಗಳಿಸಿ ಜಿಲ್ಲೆಗೆ ತೃತೀಯ ಸ್ಥಾನವನ್ನು ಪಡೆದುಕೊಂಡಿರುತ್ತಾರೆ.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ.ನಂದಾ ಹಣಬರಟ್ಟಿ ಅವರು ಪರೀಕ್ಷೆಯಲ್ಲಿ ಜಿಲ್ಲೆಗೆ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿನಿ ಕುಮಾರಿ ಸುಷ್ಮಾ ತಾವರೇಪ್ಪ ನಾಯಕ ಇವರನ್ನು ಉಪನಿರ್ದೇಶಕರ ಕಛೇರಿಯಲ್ಲಿ ಸನ್ಮಾನಿಸಿದರು. ಎಲ್ಲ ವಸತಿ ನಿಲಯ ಹಾಗೂ ವಸತಿ ಶಾಲೆಯ ವಿದ್ಯಾರ್ಥಿಗಳಿಗೆ, ಇಂತಹ ಸಾಧನೆಗಳು ಎಲ್ಲ ವಸತಿ ಶಾಲೆಗಳಲ್ಲಿ ಮುಂದುವರೆಯಲಿ ಎಂದು ವಿದ್ಯಾರ್ಥಿಗಳಿಗೆ ಅಭಿನಂದಿಸಿದರು.

# ಧ್ವನಿ ಸುರುಳಿ ಬಿಡುಗಡೆ



**ಬೆಳಗಾವಿ ವಾರ್ತೆ ನವಲಗುಂದ:** ಪಂಚಗ್ರಹ ಹಿರೇಮಠದ ಗುರುಪಟ್ಟಾಧಿಕಾರ ಮಹೋತ್ಸವ ನಿಮಿತ್ತಿ 11 ದಿನಗಳ ಕಾಲ ನಿರಂತರವಾಗಿ ಪ್ರವಚನವನ್ನು ಆಯೋಜಿಸುವ ಮೂಲಕ ಆಧ್ಯಾತ್ಮದ ಜ್ಯೋತಿಯನ್ನು ಭಕ್ತರಲ್ಲಿ ಮೂಡಿಸುತ್ತಿರುವುದರಿಂದ ನಾಗಕರು ಸಾಂಸ್ಕೃತಿಕ ಚಿಂತನೆಯಲ್ಲಿ ಮುಳುಗುವಂತೆ ಮಾಡಿರುವುದು ಶ್ಲಾಘನೀಯ ಎಂದು ಹುಬ್ಬಳ್ಳಿ ಮೂರುಸಾವಿರ ಮಠದ ಶ್ರೀ ಗುರುಸಿದ್ಧ ರಾಜಯೋಗೀಂದ್ರ ಸ್ವಾಮಿಜಿ ಹೇಳಿದರು. ಪಟ್ಟಣದ ಹಿರೇಮಠದಲ್ಲಿ ಮೇ12–13 ರಂದು ಪಂಚಪೀಠಾಧೀಶ್ವರರ ನೇತೃತ್ವದಲ್ಲಿ ಜರುಗಲಿರುವ ನೂತನ ಶ್ರೀಗಳ ಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ಆಯೋಜಿಸಿಲಾದ 11 ದಿನಗಳ ಪ್ರವಚನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಭೀಮರಾಶಿ ಹೂಗಾರ ರಚಿಸಿದ ಸಾಹಿತ್ಯದ ಹಾಡುಗಳ ಸಿದ್ದೇಶ್ವರ ಶ್ರೀ ಧ್ವನಿ ಸುರುಳಿ ಬಿಡುಗಡೆ ಮಾಡಿ ಮಾತನಾಡಿದ ಅವರು ಯುಟೂಬ್,ಬ್ಲೂಟೂತ್ ಯುಗದಲ್ಲಿ ನಸಿಸಿ ಹೋಗುತ್ತಿರು ಭಕ್ತಿ ಸಂಗೀತಕ್ಕೆ ಮೆರಗು ನೀಡುವಂತೆ ಸಾವಿರ ವರ್ಷಗಳ ಇತಿಹಾಸ ಇರುವ ಹಿರೇಮಠದ ಕತೃ ಶ್ರೀ ಸಿದ್ದೇಶ್ವರ ಶ್ರೀಗಳ ಕುರಿತಾಗಿ ರಚಿತವಾದ ಭಕ್ತಿಗೀತೆಗಳು ಇಂದಿನ ಪೀಳಿಗೆಗೆ ಅವಶ್ಯವಾಗಿದೆ ಎಂದರು. ಮಾಜಿ ಸಚಿವ ಶಂಕರ ಪಾಟೀಲ್ ಮುನೇನಕೊಪ್ಪ ಮಾತನಾಡಿ ತಾಲೂಕಿನ ಎಲ್ಲ ಜನತೆಯು ನೂತನ ಶ್ರೀಗಳ ಪಟ್ಟಾಧಿಕಾರ ಮಹೋತ್ಸವ ಆಚರಣೆಗೆ ವಿಜೃಂಭನೆಯಿಂದಸಿದ್ದತೆ ನಡೆಸಿದ್ದು ಜಗದ್ಗುರು ಪಂಚಾಚಾರ್ಯರ ಸಮ್ಮುಖದಲ್ಲಿ ಪೀಠಾಧಿಕಾರ ಮಹೋತ್ಸವ ನಡೆಸಲು ಉದ್ದೇಶಿಸಿರುವುದು ಹಾಗೂ ಜಗದ್ಗುರುಗಳ ಅಡ್ಡಪಲ್ಲಕ್ಕಿ ಉತ್ಸವ ನಡೆಸುತ್ತಿರುವುದು ಈ ನೆಲದ ಹೆಮ್ಮೆಯಾಗಿದ್ದು ಜಗದ್ಗುರುಗಳ ಸಾನ್ನಿಧ್ಯದಲ್ಲಿ ನವಲಗುಂದ ಪುಣ್ಯಭೂಮಿಯಾಗಿ ರೂಪಗೊಳ್ಳಲಿ ಎಂದರು. ಹಿರೇಮಠದ ಶ್ರೀ ಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಜಿ,ತುಪ್ಪದಕುರಟ್ಟಿಯ ಪಂಡಿತಾರಾಧ್ಯ ಸ್ವಾಮಿಜಿ,ಗವಿಮಠದ ಶ್ರೀ ಬಸವಲಿಂಗಸ್ವಾಮಿಜಿ, ನಿಯೋಜಿತ ಪೀಠಾಧಿಕಾರಿ ವೀರಬಸವದೇವರು. ಅಣ್ಣಪ್ಪ ಬಾಗಿ,ವರ್ತಕರ ಸಂಘದ ಅಧ್ಯಕ್ಷ ರಾಘವೇಂದ್ರ ಧಾರವಾಡ, ವಿರೇಶ ಕೂಗುಮಠ,ಶ್ರೀಶೈಲ ಮೂಲಿಮನಿ, ಪಾಂಡಪ್ಪ ಕೋನರಡ್ಡಿ,ಸಿದ್ದಲಿಂಗಯ್ಯ ಹಿರೇಮಠ. ಅಲ್ಲಾಸಾಬ ಕಲ್ಲಕುಟ್ರಿ,ಅಪ್ಪಣ್ಣ ಹಳ್ಳದ,ಅಡಿವೆಪ್ಪ ಶಿರಸಂಗಿ,ಯಲ್ಲಪ್ಪ ಭೋವಿ ಮತ್ತಿತರರು ಉಪಸ್ಥಿತರಿದ್ದರು.

# ಯಶಸ್ವಿಯಾದ ರಂಗಾಯಣದ ಮಕ್ಕಳ ರಂಗ ತರಬೇತಿ ಶಿಬಿರ

**ಬೆಳಗಾವಿ ವಾರ್ತೆ ಧಾರವಾಡ:** ಅಗಾಧವಾದ ಇತಿಹಾಸ ವುಳ್ಳ ರಂಗಭೂಮಿಯು ಕುರಿತು ಮಕ್ಕಳಿಗೆ ತಿಳಿವಳಿಕೆಯನ್ನು ನೀಡಿ, ರಂಗಚಟುವಟಿಕೆಗಳಲ್ಲಿ ಅವರನ್ನು ಕ್ರಿಯಾಶೀಲರಾಗಿ ತೊಡಗಿಸಿಕೊಳ್ಳಲು ರಂಗಾಯಣವು ಸಹಕಾರಿಯಾಗಿದೆ ಎಂದು ಮಕ್ಕಳ ಸಾಹಿತಿಗಳಾದ ನಿಂಗಣ್ಣ ಕುಂಟಿ ಅವರು ಹೇಳಿದರು.

ರಂಗಾಯಣ ಧಾರವಾಡವು ಪಂ.ಬಸವರಾಜ ರಾಜಗುರು ಬಯಲು ರಂಗಮಂದಿರದಲ್ಲಿ "ಅಭಿನಯ–ಅಭಿವ್ಯಕ್ತಿ" ಧ್ಯೇಯ ವಾಕ್ಯದಡಿ ಆಯೋಜಿಸಿದ್ದ "ಮಕ್ಕಳ ರಂಗ ತರಬೇತಿ ಶಿಬಿರದ ಸಮಾರೋಪ ಹಾಗೂ ಚಿಣ್ಣರ ನಾಟಕೋತ್ಸವ"ವದ ಕುರಿತು ಅವರು ಸಮಾರೋಪ ನುಡಿಗಳನ್ನಾಡಿದರು.

ಇಂದಿನ ಆಧುನಿಕ ಸಮಾಜ ಮಕ್ಕಳ ಬಾಲ್ಯವನ್ನು ಕಸಿದುಕೊಂಡಿದೆ. ಬೇದ–ಭಾವವಿಲ್ಲದ ರಂಗಭೂಮಿಯಲ್ಲಿ ಮಕ್ಕಳು ಸಂಗೀತ, ನಾಟಕ, ಚಿತ್ರಕಲೆಗಳ ರಂಗ ಚಟುವಟಿಕೆಗಳ ಶಿಬಿರದಲ್ಲಿ ತೊಡಗಿಕೊಂಡಿರುವುದು ರಂಗಾಯಣದ ಹೆಮ್ಮೆ. ಕೇವಲ 22 ದಿನಗಳಲ್ಲಿ ಮಕ್ಕಳಿಗೆ ಸಂಗೀತ, ನೃತ್ಯ, ಆರೋಗ್ಯದ ಕುರಿತು ಮನೆಮದ್ದಿನ ಉಪಯೋಗ, ಗ್ರಾಮೀಣ ಸೊಗಡಾದ ಅಲ್ಲಿಕೇರಿ, ಜಾತ್ರೆ, ಸಂತೆ, ಸೇರಿದಂತೆ ಹಲವಾರು ವಿಷಯಗಳ ಕುರಿತು ಅರಿವನ್ನು ಮೂಡಿಸುವ ಕಾರ್ಯವನ್ನು ಈ ಶಿಬಿರದ ಮೂಲಕ ಮಾಡಲಾಗಿದೆ. ಮಕ್ಕಳು ಆಸಕ್ತಿಯಿಂದ ಭಾಗವಹಿಸಿ, ಅದ್ಭುತ ಸಂದೇಶ ಸಾರು ವಂತಹ ನಾಟಕಗಳಲ್ಲಿ ಮನೋಜ್ಞವಾಗಿ ಅಭಿನಯಿಸಿದ್ದಾರೆ. ಪ್ರತಿ ಪಾಲಕರು ಮಕ್ಕಳನ್ನು ಉತ್ಸಾಹದಿಂದ ಶಿಬಿರಕ್ಕೆ ಸೇರಿಸಿ, ಪ್ರೋತ್ಸಾಹ ನೀಡುತ್ತಿರುವುದು ಉತ್ತಮ ಸಂಗತಿ. ಇಂತಹ ಕಾರ್ಯಯೋಜನೆ ಗಳಿಂದ ರಂಗಾಯಣದ ಶಕ್ತಿ ಹಿರಿಯದಾಗಿದೆ ಎಂದು ಶ್ಲಾಘಿಸಿದರು.

ರಂಗಕರ್ಮಿಗಳಾದ ಮಯೂರ ಶಿಂಥೆ ಅವರು ಮಾತನಾಡಿ, ಇಂದಿನ ಪಾಲಕರು ಕೆಲಸದ ಒತ್ತಡದಲ್ಲಿ ಮಕ್ಕಳಿಗೆ ಸರಿಯಾದ ಸಮಯವನ್ನು ನೀಡಲು ಸಾಧ್ಯವಾಗುತ್ತಿಲ್ಲ. ಇದರಿಂದ ಮಕ್ಕಳು ಕೇವಲ ಮನೆಯಲ್ಲಿಯೇ ದಿನಗಳೆಯುವಂತಾಗಿದೆ. ಆದರೆ ರಂಗಾಯಣದ ಈ ಶಿಬಿರವು ಮಕ್ಕಳಲ್ಲಿರುವ ವಿಶೇಷ ಪ್ರತಿಭೆಗಳನ್ನು ಹೊರತಂದು ಅವರನ್ನು ಸಾಂಸ್ಕೃತಿಕ ಕ್ಷೇತ್ರದಲ್ಲಿ ಬೆಳವಣಿಗೆ ಹೊಂದುವಂತೆ ಪ್ರೇರಣೆ ನೀಡಿದೆ ಎಂದರು.



ರಂಗಾಯಣ ನಿರ್ದೇಶಕರಾದ ಝುಕೀರ ನದಾಫ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಬಿರದಲ್ಲಿ ಆಸಕ್ತಿ ವಹಿಸಿ, ಯಾವುದೇ ಭಯ, ಅಳುಕಿಲ್ಲದೆ ನಾಟಕಗಳಲ್ಲಿ ಮಕ್ಕಳು ಅಭಿನಯಿಸುವ ಮೂಲಕ ಈ ಶಿಬಿರವನ್ನು ಯಶಸ್ವಿಗೊಳಿ ಸಿದ್ದಾರೆ. ಮಕ್ಕಳು ಶಿಬಿರದಲ್ಲಿ ಪಡೆದಂತಹ ರಂಗ ಕಲಿಕೆಯನ್ನು ಮುಂದಿನ ದಿನಗಳಲ್ಲಿಯೂ ರೂಢಿಸಿಕೊಳ್ಳುವ ಮೂಲಕ ತಮ್ಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಚಿಣ್ಣರಮೇಳದ ಸಂಚಾಲಕರಾದ ಅರುಣಕುಮಾರ ಮೇದಾರ ಅವರನ್ನು ಸನ್ಮಾನಿಸಲಾಯಿತು. ರಂಗಾಯಣ ಆಡಳಿತಾಧಿಕಾರಿಗಳಾದ ಶಶಿಕಲಾ ಹುಡೇದ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ತರಬೇತುದಾರರಾದ ರಾಜ್ ಕವಡೆನವರ, ಸಂಗೀತಗಾರರಾದ ಸುನಂದಾ ನಿಂಬನಗೌಡರ ಸೇರಿದಂತೆ ಇತರರು ಉಪಸ್ಥಿತರಿದ್ದರು. ಶಿಬಿರದ ಕುರಿತು ಮಕ್ಕಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ನಂತರ ಆಂಗಿಕ ತಂಡ ಬಿಳಿಯ ಬೆಳ್ಳಕ್ಕಿ, ಸಾತ್ವಿಕ ತಂಡ ಬನ್ನಿ ಮುಡಿಯೋಣ ಬಾರ/ ಕಲ್ಯಾಣವೆಂಬ ವಚನ ಸಮೂಹ ನೃತ್ಯಗಳನ್ನು ಹಾಗೂ ವಾಚಿಕ ತಂಡ "ನಿದ್ರಾ ನಗರಿ", ಆಹಾರ್ಯ ತಂಡ "ನಾಯಿತಿಪ್ಪ" ನಾಟಕವನ್ನು ಪ್ರಸ್ತುತಪಡಿಸುವ ಮೂಲಕ ನೋಡುಗರ ಗಮನ ಸೆಳೆದರು.

# ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

ಗದಗ: 2024–25 ನೇ ಸಾಲಿನ ರೋಣ, ಗಜೇಂದ್ರಗಡ ತಾಲ್ಲೂಕಿನ ಮುಂಗಾರು ಮತ್ತು ಹಿಂಗಾರು ಹಂಗಾಮಿನ ತಿರಸ್ಕೃತಗೊಂಡ ಬೆಳೆ ವಿಮೆ ಪ್ರಸ್ತಾವಣೆಗಳಿಗೆ ರೈತರಿಂದ ಆಕ್ಷೇಪಣೆ ಸಲ್ಲಿಸುವ ಬಗ್ಗೆ ರೋಣದ ಸಹಾಯಕ ಕೃಷಿ ನಿರ್ದೇಶಕರು, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಕೇರಿ ಗ್ರಾಮದಲ್ಲಿ ನರೇಗಾ ಐಇಸಿ ಕಾರ್ಯಕ್ರಮದಡಿ ರೋಜಗಾರ್ ದಿವಸ್ ಆಚರಣೆ ನರೇಗಾ ಕಾಮಗಾರಿಯಲ್ಲಿ ಎಲ್ಲಾ ಕೂಲಿಕಾರರು ಕೆಲಸಕ್ಕೆ ಹಾಜರಾಗಿರಿ: ಶ್ರೀನಿವಾಸ ಚಿತ್ರಗಾರ



**ಬೆಳಗಾವಿ ವಾರ್ತೆ ಕೊಪ್ಪಳ:** ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಎಲ್ಲಾ ಕೂಲಿಕಾರರು ಫಾರಂ ನಂ.6 ಸಲ್ಲಿಸುವ ಮೂಲಕ ಕೂಲಿ ಕೆಲಸಕ್ಕೆ ಹಾಜರಾಗುವಂತೆ ಜಿಲ್ಲಾ ಪಂಚಾಯತ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ ಕರೆ ನೀಡಿದರು.

ಕಲಕೇರಿ ಗ್ರಾಮ ಪಂಚಾಯತಿಯ ವತಿಯಿಂದ ಮಂಗಳವಾರ ಕಲಕೇರಿ ಗ್ರಾಮದ ಸಂತ ಷರೀಪರ ದೇವಸ್ಥಾನದ ಆವರಣದಲ್ಲಿ ಆಯೋಜಿಸಿದ್ದ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಐಇಸಿ ಕಾರ್ಯಕ್ರಮದಡಿ ರೋಜಗಾರ್ ದಿವಸ್ ಕಾರ್ಯಕ್ರಮದಲ್ಲಿ ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದರು.

ಪ್ರತಿ ಮಾನವ ದಿನಕ್ಕೆ ರೂ. 370 ಕೂಲಿ ನಿಗದಿಪಡಿಸಿದ್ದು, ಸಂಪೂರ್ಣವಾಗಿ ಕೂಲಿ ಕೆಲಸ ನಿರ್ವಹಿಸಿ ಪೂರ್ತಿ ಹಣ ಪಡೆದುಕೊಳ್ಳಬೇಕು. ಬಿಸಿಲಿನ ಪ್ರಮಾಣ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು ಕೆಲಸದ ಜೊತೆಗೆ ಆರೋಗ್ಯ ಕಡೆ ಕಾಳಜಿವಹಿಸಬೇಕು. 18 ವರ್ಷ ಮೇಲ್ಪಟ್ಟ ಕುಟುಂಬದ ಸದಸ್ಯರು ಜಾಬಕಾರ್ಡ ಬಳಕೆ ಮಾಡಿಕೊಂಡು ಕೂಲಿ ಕೆಲಸ ಪಡೆಯಲು ಕಡ್ಡಾಯವಾಗಿ ನಮೂನೆ–6 ಸಲ್ಲಿಸಬೇಕು. ಮೇ ಮತ್ತು ಜೂನ್ ವರೆಗೆ 60 ದಿನಗಳ ಕೂಲಿ ಕೆಲಸ ಪಡೆಯಬೇಕೆಂದರು. ಕೂಲಿ ಹಣದಿಂದ ಮಕ್ಕಳ ಶಾಲಾ, ಕಾಲೇಜು ಶುಲ್ಕ ಭರಿಸಲು, ಮಕ್ಕಳ ಸ್ಪರ್ಧಾತ್ಮಕ ಪರೀಕ್ಷೆಗೆ ಶುಲ್ಕ ಹಾಗೂ ಕುಟುಂಬ ನಿರ್ವಹಣೆಗೆ ಅನುಕೂಲ ವಾಗುತ್ತದೆ ಎಂದರು. ಜಾಬಕಾರ್ಡನ ಲ್ಲಿರುವ ಕುಟುಂಬದ ಎಲ್ಲ ಸದಸ್ಯರು ಇ–ಕೆವೈಸಿ ಹೊಂದಿದ ನಂತರವೇ ಎನ್‌ಎಂಆರ್ ಪ್ರಕಾರ ಕೂಲಿಕಾರರು ಕೂಲಿ ಕೆಲಸಕ್ಕೆ ಹಾಜರಾಗಬೇಕು. 1 & 2ನೇ ಹಾಜರಾತಿ ಕಡ್ಡಾಯವಾಗಿರುತ್ತದೆ ಎಂದು ಹೇಳಿದರು.

ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ ಮಾತನಾಡಿ, ಪ್ರತಿ ಜಾಬಕಾರ್ಡಗೆ 100 ಮಾನವ ದಿನಗಳ ಕೂಲಿ ಕೆಲಸ ನೀಡಲಾಗುತ್ತಿದ್ದು, ಇದರ ಸದುಪಯೋಗ ಪಡೆಯಬೇಕು. ಗ್ರಾಮೀಣ ಭಾಗದ ಕೂಲಿಕಾರರು ಕೂಲಿ ಅರಸಿ ಗುಳೆ ಹೋಗುವದನ್ನು ನಿಯಂತ್ರಿಸಿ ಸ್ಥಳೀಯವಾಗಿ ಉದ್ಯೋಗ ಒದಗಿಸಿ ಅವರಿಗೆ ಕೂಲಿ ಹಣ ಪಾವತಿಸಿ ಸ್ವಾವಂಬಿ ಜೀವನ ನಡೆಸಲು ಯೋಜನೆಯ ಸದುದ್ದೇಶವಾಗಿದೆ. ಎಲ್ಲಾ ಕೂಲಿಕಾರರು ಸಾಮಾಜಿಕ ಭದ್ರತೆ ವಿಮೆಗಳಾದ ಪಿಎಂಜೆಜೆಬಿವೈ, ಪಿಎಂಎಸ್‌ಬಿವೈ.ಗಳಲ್ಲಿ ನೊಂದಣಿ ಮಾಡಿಕೊಳ್ಳುವಂತೆ ಕರೆ ನೀಡಿದರು.

ಗ್ರಾಮ ಪಂಚಾಯತಿ ಡಿಇಒ ಕುಮಾರ ಪರಗಿ, ಬೇರ್‌ಫೂಟ್ ಟೆಕ್ನಿಷಿಯನ್ ಮಾರುತಿ ವಾಲ್ಮೀಕಿ, ಗ್ರಾಮ ಕಾಯಕ ಮಿತ್ರ ರಾಧಾ, ಕಾಯಕ ಬಂಧುಗಳಾದ ನಾಗರಾಜ ಮಲಾಜಿ, ಮುತ್ತು ಲಮಾಣಿ, ಕುಮಾರ ಚವ್ಹಾಣ್, ರಾಮಣ್ಣ ಉಪ್ಪಾರ, ವಿರೇಶ ಹರಿಜನ, ಕೂಲಿಕಾರರು ಉಪಸ್ಥಿತರಿದ್ದರು.

# ಕೌಶಲ್ಯ, ಉದ್ಯಮಶೀಲತೆ ತರಬೇತಿಗೆ ಯುವನಿಧಿ ಫಲಾನುಭವಿಗಳು ನೋಂದಾಯಿಸಿ

**ಬೆಳಗಾವಿ ವಾರ್ತೆ ಕೊಪ್ಪಳ:** ಕೊಪ್ಪಳ ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿಯಲ್ಲಿ ನೋಂದಣಿಯಾದ ಫಲಾನುಭವಿಗಳು ಕಡ್ಡಾಯವಾಗಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿಯನ್ನು ಪಡೆಯಲು ನೋಂದಾಯಿಸುವಂತೆ ಜಿಲ್ಲಾ ಕೌಶಲ್ಯ ಮಿಷನ್ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ತಿಳಿಸಿದ್ದಾರೆ.

ಯುವನಿಧಿ ಯೋಜನೆಯಡಿ ನೋಂದಾಯಿಸಿಕೊಂಡು ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಯುವಕ, ಯುವತಿಯರಿಗೆ ಯುವನಿಧಿ ಪ್ಲಸ್ ಕಾರ್ಯಕ್ರಮದಡಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿಯನ್ನು ಜಿಲ್ಲೆಯ ಜಿಟಿಟಿಸಿ, ಸಿಡಾಕ್, ಸರ್ಕಾರಿ ಐಟಿಐಗಳಲ್ಲಿ ಯುವನಿಧಿ ಪ್ಲಸ್ ಅಡಿಯಲ್ಲಿ ತರಬೇತಿಯನ್ನು ನೀಡಲಾಗುತ್ತಿದೆ. ಆದರೂ ಸಹ ನಿರೀಕ್ಷಿತ ಸಂಖ್ಯೆಯ ಯುವನಿಧಿ ಫಲಾನುಭವಿಗಳು ಯುವನಿಧಿ ಪ್ಲಸ ಅಡಿಯಲ್ಲಿ ತರಬೇತಿಯನ್ನು ಪಡೆಯುತ್ತಿರುವುದಿಲ್ಲದರ ಕಾರಣ ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳು https://skillmission.karnataka.gov.in/app/registration_verify ಈ ಲಿಂಕ್‌ನ್ನು ಉಪಯೋಗಿಸಿ ತುರ್ತಾಗಾಗಿ ನೋಂದಾಯಿಸಿಕೊಂಡು ಯುವನಿಧಿ ಪ್ಲಸ್ ಅಡಿಯಲ್ಲಿ ತರಬೇತಿಯನ್ನು ಪಡೆದುಕೊಳ್ಳಬೇಕು ಮತ್ತು ಈ ಸುವರ್ಣಾಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು.

**ವಿಶೇಷ ಸೂಚನೆ:** ಪ್ರಸ್ತುತ ಯುವನಿಧಿ ಫಲಾನುಭವಿಗಳು ಯುವನಿಧಿ–ಪ್ಲಸ್ ಕಾರ್ಯಕ್ರಮದಡಿ ತರಬೇತಿಯನ್ನು ಪಡೆದರೂ ಸರ್ಕಾರವು ನಿಗದಿಪಡಿಸಿರುವ ಅವಧಿಯವರೆಗೆ ನಿರುದ್ಯೋಗ ಭತ್ಯೆಯನ್ನು ಪಡೆಯಲು ಯಾವುದೇ ಅಡಚಣೆಗಳು ಇರುವುದಿಲ್ಲ.

ಪೋರ್ಟಲ್‌ನಲ್ಲಿನ ಕೌಶಲ್ಯ ತರಬೇತಿ ನೋಂದಣಿ ಸಂಬಂಧ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ಕೆ.ಜಿ.ಐ.ಡಿ ಕಚೇರಿ ಎದುರುಗಡೆ, ಜಿಲ್ಲಾಡಳಿತ ಭವನ ಕೊಪ್ಪಳ ರವರನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶಲ್ಯ ಮಿಷನ್ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಕಾರ್ಮಿಕ ದಿನಾಚರಣೆ: ಹೂವಿನಾಳ ಗ್ರಾಮದಲ್ಲಿ ಕಾನೂನು ಅರಿವು ನೆರವು

**ಬೆಳಗಾವಿ ವಾರ್ತೆ ಕೊಪ್ಪಳ :** ಅಂತಾರಾಷ್ಟ್ರೀಯ ಕಾರ್ಮಿಕ ದಿನಾಚರಣೆಯ ಅಂಗವಾಗಿ ಕೊಪ್ಪಳ ತಾಲೂಕಿನ ಹೂವಿನಾಳ ಗ್ರಾಮದ ಶ್ರೀ ಆಂಜನೇಯ ದೇವಸ್ಥಾನದಲ್ಲಿ ಇತ್ತೀಚೆಗೆ ಕಾನೂನು ಅರಿವು ನೆರವು ಕಾರ್ಯಕ್ರಮ ನಡೆಯಿತು.

ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಬಳಿಕ ಮಾತನಾಡಿ, ಅಂತರಾಷ್ಟ್ರೀಯ ಕಾರ್ಮಿಕ ದಿನ ಎನ್ನುವ ಬದಲು ಶ್ರಮಯೋಗಿ ದಿನ ಎಂದು ಕರೆಯುವುದು ಹೆಚ್ಚು ಸೂಕ್ತ. ಹಿಂದೆ ಶರಣಾಧಿ ಪ್ರಮಥರು ವಾಣಿಗಳಂತೆ ಕಾಯಕದ ಮಹತ್ವವನ್ನು ಬಸವಣ್ಣನವರು ಕಾಯಕವೇ ಕೈಲಾಸ ಎಂದು ನುಡಿದು ಕಾಯಕದ ಮಹತ್ವವನ್ನು ಸಾರಿದ್ದಾರೆ. ಅದೇ ರೀತಿ 'ನೀನು ಅಧ್ಯಕ್ಷನಾಗಿರು, ಚಮ್ಮಾರನಾಗಿರು, ಕಮ್ಮಾನಾಗಿರು, ಏನೇ ಆಗಿದ್ದರೂ ಮೊದಲು ಶ್ರಮಯೋಗಿ ಆಗಿ ಕೆಲಸಗಾರನಾಗು, ಕಾರ್ಮಿಕನಾಗಿರು ಎಂದು ಡಾ. ಬಿ.ಆರ್.ಅಂಬೇಡ್ಕರ್ ರವರು ಹೇಳಿದ್ದಾರೆ. ಹಾಗಾಗಿ ಶ್ರಮಿಕವರ್ಗ ದೇಶದ ಅಭಿವೃದ್ಧಿ, ಉನ್ನತಿಗೆ ಮುನ್ನುಡಿಯಾಗಿದ್ದಾರೆ ಎಂದರು.

ಕಲ್ಯಾಣ ಕರ್ನಾಟಕ ಜಿಲ್ಲೆಗಳ ನೋಂದಾಯಿತ ಕಾರ್ಮಿಕ ಸಂಘಗಳ ಒಕ್ಕೂಟ ಅಧ್ಯಕ್ಷರಾದ ರಮೇಶ ಘೋರ್ಪಡೆ ಅವರು ಮಾತನಾಡಿ, ಕಾರ್ಮಿಕ ಇಲಾಖೆಯಿಂದ ನಮ್ಮ ಕಾರ್ಮಿಕರಿಗೆ ಒಳ್ಳೆಯ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಇದರಿಂದ ನಮ್ಮ ಕಾರ್ಮಿಕರು ಉತ್ತಮ ಜೀವನ ಕಟ್ಟಿಕೊಳ್ಳಲು ಕಟ್ಟಡ ನಿರ್ಮಾಣ ಕಾರ್ಮಿಕರಿಗೆ ಜೀವನ ಮಟ್ಟವನ್ನು ಸುಧಾರಿಸಿಕೊಳ್ಳಲು ಸಾಧ್ಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾರ್ಮಿಕ ನಿರೀಕ್ಷಕರಾದ ಮಂಜುಳಾ ವಿಶ್ವನಾಥ ಅವರು ಮಾತನಾಡಿ, ಪಾಶ್ಚಿಮಾತ್ಯ ದೇಶಗಳಲ್ಲಿ ಕಾರ್ಮಿಕರ ದಂಗೆಗಳು 1883 ರಲ್ಲಿ ಪ್ರಾರಂಭವಾದವು.



ಚಿಕ್ಕಾಗೋದಲ್ಲಿ ಕಾರ್ಮಿಕ ಸಂಘಟನೆಗಳು ಹೋರಾಟ ವನ್ನು ಕೆಲಸದ ಅವಧಿ ನಿರ್ಧರಿಸುವ ಸಲುವಾಗಿ ಮತ್ತು ಅನೇಕ ಶೋಷಣೆಗಳ ವಿರುದ್ಧ ಹೋರಾಟ ಪ್ರಾರಂಭಿಸಿದರು. 1886ರಲ್ಲಿ 8 ಗಂಟೆಗಳ ಕೆಲಸದ ಅವಧಿಯನ್ನು ನಿರ್ಣಯಿಸಲಾದ ಪ್ರಯುಕ್ತ ಮೇ 1ರ 1886 ರಿಂದ ಜಾಗತಿಕ ಮಟ್ಟದಲ್ಲಿ ಅಂತರಾಷ್ಟ್ರೀಯ ಕಾರ್ಮಿಕ ದಿನವನ್ನು ಆಚರಣೆ ಮಾಡುತ್ತಾ ಬರಲಾಯಿತು. ಭಾರತದಲ್ಲಿ 1937 ರಲ್ಲಿ ಚೆನ್ನೈನಲ್ಲಿ ಕಾರ್ಮಿಕ ಸಂಘಟನೆಗಳು ಹೋರಾಟದ ನೆನಪಿಗಾಗಿ ಭಾರತದಲ್ಲಿಯೂ ಕೂಡಾ ಕಾರ್ಮಿಕ ದಿನ ಆಚರಿಸುತ್ತಾ ಬರಲಾಯಿತು. ಈ ದಿನದಂದು ಕಾರ್ಮಿಕರ ಕುರಿತು ಕಾರ್ಯನಿರ್ವಹಿಸಿದ ಕಾರ್ಮಿಕ ಪ್ರತಿನಿಧಿ ಸಂಘಟನೆಗಳು, ಸಂಘ ಸಂಸ್ಥೆಗಳನ್ನು ಗುರುತಿಸಿ ಪ್ರೋತ್ಸಾಹ ನೀಡಲು ಆಚರಿಸುತ್ತಾ ಬರುತ್ತಿದೆ ಎಂದು ಕಾರ್ಮಿಕ ದಿನ ಇತಿಹಾಸ ತಿಳಿಸುತ್ತಾ ಕಾರ್ಮಿಕ ಇಲಾಖೆಯಲ್ಲಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಅಡಿ ಕಟ್ಟಡಕ್ಕೆ ಸಂಬಂಧಿಸಿದಂತೆ ಕೆಲಸ ನಿರ್ವಹಿಸುತ್ತಿರುವವರು ನೋಂದಣಿಯಾಗಲು, ನೋಂದಣಿ ಪೂರ್ವದ 12 ತಿಂಗಳಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕನಿಷ್ಠ 90 ದಿನಗಳು ಕೆಲಸ ನಿರ್ವಹಿಸಿರಬೇಕು. 18 ರಿಂದ 60 ವರ್ಷದೊಳಗಿರಬೇಕು. ಉದ್ಯೋಗ ದೃಢೀಕರಣ ಪತ್ರ ಅರ್ಜಿದಾರ ಹಾಗೂ ಅವಲಂಬಿತರ ಆಧಾರ ಕಾರ್ಡ್ ಪ್ರತಿ, ಅರ್ಜಿದಾರರ ಬ್ಯಾಂಕ್ ಪಾಸ್‌ಬುಕ್ ಪ್ರತಿ, ಅರ್ಜಿದಾರರ ಆಧಾರ್ ಕಾರ್ಡ್ಗೆ ಲಿಂಕ್ ಆಗಿರುವ ದೂರವಾಣಿ ಸಂಖ್ಯೆ, ಹೊಂದಿರಬೇಕೆಂದು ತಿಳಿಸಿದರು.

ಇದಲ್ಲದೇ ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ನೀಡಲಾಗುವ ಸೌಲಭ್ಯಗಳಾದ, ಮದುವೆ ಧನಸಹಾಯ, ಹೆರಿಗೆ ಧನಸಹಾಯ, ಅಂತ್ಯಕ್ರಿಯೆ ವೆಚ್ಚ, ಶೈಕ್ಷಣಿಕ ಧನಸಹಾಯ, ವೈದ್ಯಕೀಯ ಸಹಾಯಧನ, ಅಪಘಾತ ಪರಿಹಾರ, ಪ್ರಮುಖ ವೈದ್ಯಕೀಯ ಸಹಾಯಧನ, ತಾಯಿ ಮಗು ಸಹಾಯ ಹಸ್ತ, ಪಿಂಚಣಿ ಸೌಲಭ್ಯಗಳನ್ನು ಪಡೆಯಬಹುದಾಗಿರುತ್ತದೆ. ಈ ಸೌಲಭ್ಯಗಳನ್ನು ಪಡೆಯಲು ಕಾಲಕ್ಕೆ ಗುರುತಿನ ಚೀಟಿಯ ನವೀಕರಣವನ್ನು ಮಾಡಿಸುವುದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿ, ಅಸಂಘಟಿತ ಸಾಮಾಜಿಕ ಭದ್ರತಾ ಮಂಡಳಿ ಅಡಿ ಸಿಗುವ ಸೌಲಭ್ಯಗಳ ಕುರಿತು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕರಾದ ಬಸವರಾಜ ಹಿರೇಗೌಡ್ರ, ಕಾರ್ಮಿಕ ಇಲಾಖೆಯ ಕ್ಷೇತ್ರ ನಿರ್ವಾಹಕ ಹೇಮಂತ್ ಸಿಂಗ್, ಬಹದ್ದೂರ ಬಂಡಿ ಕಾರ್ಮಿಕ ಸಂಘದ ಅಧ್ಯಕ್ಷರಾದ ಮಹಿಬೂಬ ಮಣ್ಣೂರ, ಹೂವಿನಾಳ ಕಟ್ಟಡ ಕಾರ್ಮಿಕ ಸಂಘದ ಅಧ್ಯಕ್ಷರಾದ ಇಂದ್ರಾನಾಯಕ ಸೇರಿದಂತೆ ವಿವಿಧ ಸಂಘಟನೆಯ ಪದಾಧಿಕಾರಿಗಳು, ಕಾರ್ಮಿಕರು ಉಪಸ್ಥಿತರಿದ್ದರು.

# ಮಕ್ಕಳ ಉತ್ತಮ ಜೀವನ ರೂಪಿಸಲು ಸಾಹಿತ್ಯ ಮತ್ತು ಸಂಸ್ಕೃತಿ ಉತ್ತಮ ಗ್ರಂಥಗಳ ಓದಿನ ಅಭಿರುಚಿ ಬೆಳೆಸಬೇಕು



ಅಡಹಳ್ಳಿ: ಸಪ್ತಸಾಗರ ಗ್ರಾಮದಲ್ಲಿ ನಡೆದ ಶಿವಬಸವ ಗುರುಮಂದಿರದ ಪ್ರಥಮ ವರ್ಷಾಚರಣೆ ಕಾರ್ಯಕ್ರಮವನ್ನು ಶ್ರೀಗಳು ಹಾಗೂ ಗಣ್ಯರು ಉದ್ಘಾಟಿಸಿದರು.

**ಬೆಳಗಾವಿ ವಾರ್ತೆ ಅಡಹಳ್ಳಿ:** ಧರ್ಮ ಹಾಗೂ ಧಾರ್ಮಿಕ ಕಾರ್ಯಗಳು ಮನುಷ್ಯನನ್ನು ಉತ್ತಮ ಜೀವನ ನಡೆಸಲು ಪ್ರೇರೇಪಿಸುತ್ತವೆ. ಜಗತ್ತನ್ನು ಪುಸ್ತಕಗಳು ಆಳುತ್ತವೆ. ಶ್ರೀಗಳ ಗ್ರಂಥಗಳಲ್ಲಿ ಸಾಮಾಜಿಕ ಮೌಲ್ಯಗಳು ತುಂಬಿರುತ್ತವೆ. ಮಕ್ಕಳ ಉತ್ತಮ ಜೀವನ ರೂಪಿಸಲು ಸಾಹಿತ್ಯ ಮತ್ತು ಸಂಸ್ಕೃತಿ ಉತ್ತಮ ಗ್ರಂಥಗಳ ಓದಿನ ಅಭಿರುಚಿ ಬೆಳೆಸಬೇಕಾಗಿದೆ ಎಂದು ಹಾವೇರಿ ಹುಕ್ಕೇರಿಮಠದ ಸದಾಶಿವ ಸ್ವಾಮೀಜಿ ಅಭಿಪ್ರಾಯ ವ್ಯಕ್ತಪಡಿಸಿದರು,

ಅವರು ಸಮೀಪದ ಸಪ್ತಸಾಗರ ಗ್ರಾಮದಲ್ಲಿ ಮಂಗಳವಾರ ಆಯೋಜಿಸಲಾದ ಶಿವಬಸವ ಗುರುಮಂದಿರದ ಪ್ರಥಮ ವರ್ಷಾಚರಣೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿ, ಹೊಗಳಿಕೆ ತೆಗಳಿಕೆಗೆ ತಲೆಗೊಡಬಾರದು, ಜೀವನ ಹಾಳಾಗದಂತೆ ಬಾಳಿ ಬದುಕುವ ಮನಸ್ಥಿತಿ ಕಲಿಯಬೇಕು. ಸ್ವಚ್ಛ ಹಾಗೂ ಬಿಚ್ಚು ಮನಸ್ಸಿನಿಂದ ಮಾತನಾಡಬೇಕು. ದ್ವೇಷ, ಅಸೂಯೆ ಬೇಡ. ಸ್ವಾರ್ಥ ಬಿಟ್ಟು ಸತ್ಯದ ಕಡೆಗೆ ಇದ್ದರೆ ಎಲ್ಲರೂ ಗೌರವಿಸದಿದ್ದರೂ ಭಗವಂತನಿಗೆ ಇಷ್ಟವಾಗುತ್ತಿರಿ ಎಂದರು,

ಹಲ್ಯಾಳ ವೀರಕ್ತಮಠದ ಗುರುಸಿದ್ಧ ಸ್ವಾಮೀಜಿ ಮಾತನಾಡಿ, ಎಲ್ಲರಿಗಿಂತ ನಾನೇ ಜಾಣ, ನಾನೇ ಶ್ರೇಷ್ಠ ಎನ್ನುವ ಭಾವನೆ ಮೂಡಿದರೆ ಆತನಿಗೆ ಜ್ಞಾನ ಸಿಗುವುದಿಲ್ಲಾ. ಅಹಂಕಾರವೆಂಬ ಧೂಳು ಕುಳಿತರೆ ಆತನನ್ನು ತಿದ್ದಲು ಯಾರಿಂದಲೂ ಸಾಧ್ಯವಿಲ್ಲಾ ಎಂದರು,

ಈ ವೇಳೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಪ್ರಾರ್ಥನಾ ಬಿರಾದಾರಪಾಟೀಲ ಹಾಗೂ ಗ್ರಾಮದ 90% ಕ್ಕಿಂತ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳನ್ನು ಶ್ರೀಗಳೂ ಹಾಗೂ ಗ್ರಾಮದ ಮುಖಂಡರು ಸತ್ಕರಿಸಿದರು,

ಮಹಾಲಿಂಗಯ್ಯ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು, ಈ ವೇಳೆ; ತಜ್ಞ ರುದ್ರಪ್ಪ ವಾಸ್ತು, ಅಶೋಕ ಐಗಳಿ, ರವೀಂದ್ರ ಬೊಮ್ಮನ್ನವರ, ಮಹಾವೀರ ಬಿಳಿಕುರಿ, ಸಂಜಯ ನಾಡಗೌಡ, ಆರ್.ಎ. ಪಾಟೀಲ, ಬಾಬುಲಾಲ್ ನದಾಫ್, ಡಿ.ಬಿ. ನದಾಫ್, ಮಲ್ಲಪ್ಪ ದರೂರ, ಸದಾಶಿವ ಹಣಗಂಡಿ, ರಾಮು ಗಸ್ತಿ, ಪಿಡಿಓ ಅಚ್ಚುತ ಕುಲಕರ್ಣಿ, ಗ್ರಾಮಾಡಳಿತಾಧಿಕಾರಿ ಅಶೋಕ ಕೋಗಿಲೆ, ಯಲ್ಲಪ್ಪ ಕಾಂಬಳೆ, ಚಿದಾನಂದ ಮಾಂಗ, ಅಪ್ಪಾಸಾಬ ಕಾಂಬಳೆ ಸೇರಿದಂತೆ ಹಲವರು ಇದ್ದರು.

# ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಸನ್ಮಾನ

**ಬೆಳಗಾವಿ ವಾರ್ತೆ ಅಥಣಿ:** ಹಾವೇರಿಯ ಹುಕ್ಕೇರಿ ಮಠದ ಪೂ.ಲಿಂ.ಶ್ರೀ.ಮ.ನಿ. ಪ್ರ. ಶಿವಬಸವ ಮಹಾ ಶಿವಯೋಗಿಗಳ ಜನ್ಮಸ್ಥಳ ಸಪ್ತಸಾಗರದಲ್ಲಿ ಶ್ರೀ ಶಿವಬಸವ ಗುರು ಮಂದಿರದ ಪ್ರಥಮ ವರ್ಷಾಚರಣೆ ಸಮಾರಂಭ ಜರುಗಿತು.

ತಾಲೂಕಿನ ಸಪ್ತಸಾಗರ ಶಾರದಾ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯ, ಸಪ್ತಸಾಗರ ಪ್ರೌಢಶಾಲೆಯ ಎಸ್. ಎಸ್.ಎಲ್ .ಸಿ ಪರೀಕ್ಷಾ ಫಲಿತಾಂಶದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಸನ್ಮಾನಿಸಲಾಯಿತು.



ಶೇಗುಣಸಿ ಎಸ್ ಎಸ್ ಎಲ್ ಸಿ ಪರೀಕ್ಷಾ ಕೇಂದ್ರಕ್ಕೆ ಪ್ರಜ್ವಲ ರಾವಸಾಬ ಬಮ್ಮಣ್ಣವರ 98.88% ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗೆ ಹಾಗೂ ವರ್ಷಿತಾ ಭರಮಗೌಡ ಪಾಟೀಲ 97.92% ಅಂಕಗಳನ್ನು ಪಡೆದು ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿನಿಗೆ ಮತ್ತು ಅಶ್ವಥ ಮಲ್ಲಪ್ಪ ತೇಲಿ 96.16% ಅಂಕಗಳನ್ನು ಪಡೆದು ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಹಾವೇರಿಯ ಶ್ರೀ.ಮ. ನಿ.ಪ್ರ. ಸದಾಶಿವ ಮಹಾಸ್ವಾಮಿಗಳು ಹಾ ಗೂ ಹಲ್ಯಾಳದ ಶ್ರೀ.ಮ.ನಿ.ಪ್ರ. ಗುರುಸಿದ್ಧ ಮಹಾಸ್ವಾಮಿಗಳು ಹಾಗೂ ಗಣ್ಯ–ಮಾನ್ಯರು ಸೇರಿ ಸತ್ಕಾರ ಮಾಡಿದರು. ಡಿಸ್ಟಿಂಕ್ಷನ್ ದಲ್ಲಿ 14 ಮಕ್ಕಳು, ಪ್ರಥಮ ಶ್ರೇಣಿಯಲ್ಲಿ 16 ಮಕ್ಕಳು ಉತ್ತೀರ್ಣ ಹೊಂದಿ, ಸಪ್ತಸಾಗರ ಗ್ರಾಮಕ್ಕೆ ಹಾಗೂ ಪ್ರೌಢಶಾಲೆಗೆ ಕೀರ್ತಿ ತಂದಿದ್ದಕ್ಕೆ ಎಲ್ಲ ಮಕ್ಕಳಿಗೆ ಆಶೀರ್ವಾದ ಮಾಡಿದರು.

ಈ ವೇಳೆ ಆರ್.ಎ. ಪಾಟೀಲ, ರಾಜು ನಾಡಗೌಡ, ಬಾಬಾಲಾಲ ನದಾಫ, ಸದಾಶಿವ ಹನಗಂಡಿ, ಡಿ.ಬಿ.ನದಾಫ, ರವೀಂದ್ರ ಬಮ್ಮಣ್ಣವರ, ಅಶೋಕ ಐಗಳಿ, ಪರಮಾನಂದ ತೇಲಿ, ಚಂದ್ರಕಾಂತ ಸಂಕ್ರಟ್ಟಿ, ರಾಮು ಗಸ್ತಿ, ಶಂಕರ ಕೋಳೇಕಾರ, ಪರಶು ರಾಮ ಕೋಳೇಕರ, ಮುಕುಂದ ತೀರ್ಥ, ಪಿ.ಡಿ.ಓ ಅಚ್ಯುತ ಕುಲಕರ್ಣಿ, ಹಾರೂನ ಮುಲ್ಲಾ, ಮಹಾವೀರ ಬಿಲಕರ, ಗ್ರಾಮ ಲೆಕ್ಕಾಧಿಕಾರಿ ಅಶೋಕ ಕೋಗಿಲೆ, ಚಿದಾನಂ ದ ಮಾಂಗ, ಮಲ್ಲಪ್ಪ ಜಗದಾಳ, ಮಲ್ಲು ದರೂರು ಸೇರಿದಂತೆ ಇನ್ನಿತಿತರು ಇದ್ದರು.

# ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಗದಗ: 2026–27 ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಹೊಸದಾಗಿ ಮಂಜೂರಾಗಿರುವ ಮಹಿಳಾ ಪದವಿ ಪೂರ್ವ ಕಾಲೇಜು, ಗದಗ ಇಲ್ಲಿ ಪ್ರಥಮ ಪಿ.ಯು.ಸಿ. ವಿದ್ಯಾರ್ಥಿಗಳಿಗೆ ಕನ್ನಡ, ಇಂಗ್ಲೀಷ, ಹಿಂದಿ ಮತ್ತು ಉರ್ದು, ವಿಜ್ಞಾನ ವಿಭಾಗಕ್ಕೆ (ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ ಹಾಗೂ ಜೀವಶಾಸ್ತ್ರ) ವಾಣಿಜ್ಯ ವಿಭಾಗಕ್ಕೆ (ಕಂಪ್ಯೂಟರ್ ವಿಜ್ಞಾನ, ಅರ್ಥಶಾಸ್ತ್ರ, ವ್ಯವಹಾರ ಅಧ್ಯಯನ ಮತ್ತು ಲೆಕ್ಕಶಾಸ್ತ್ರ) ಕಲಾ ವಿಭಾಗಕ್ಕೆ (ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ ಮತ್ತು ಸಮಾಜಶಾಸ್ತ್ರ) ವಿಷಯುಗಳನ್ನು ಭೋಧಿಸಲು ಅರ್ಹ ಅತಿಥಿ ಉಪನ್ಯಾಸಕರು ಅವಶ್ಯವಿರುತ್ತಾರೆ.

ಆದ್ದರಿಂದ ಅರ್ಹ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಹ ಅಭ್ಯರ್ಥಿಗಳು ಮೇ 15 ರೊಳಗಾಗಿ ತಮ್ಮ ಶೈಕ್ಷಣಿಕ ದಾಖಲಾತಿಗಳನ್ನು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ ಭವನ, ಜಿಲ್ಲಾ ನ್ಯಾಯಾಲಯದ ಎದುರುಗಡೆ, ಹುಬ್ಬಳ್ಳಿ ರೋಡ್, ಗದಗ ಕಛೇರಿಗೆ ಖುದ್ದು ಭೇಟಿ ನೀಡಿ ಅರ್ಜಿ ಸಲ್ಲಿಸಲು ಅಲ್ಪಸಂಖ್ಯಾಂತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ ಬಿದರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರು ಜಾನುವಾರುಗಳಿಗೆ ಲಸಿಕೆ ಹಾಕಿಸಿ

**ಬೆಳಗಾವಿ ವಾರ್ತೆ ಮೂಡಲಗಿ:** ರೈತರು ಜಾನುವಾರುಗಳಿಗೆ ಕಾಲುಬಾಯಿ ಬೇನೆಯ ಲಸಿಕೆ ಹಾಕಿಸಿ ಅವುಗಳ ಆರೋಗ್ಯದ ಬಗ್ಗೆ ಕಾಳಜಿವಹಿಸಬೇಕು' ಎಂದು ಮೂಡಲಗಿಯ ಪಶು ಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಮೋಹನ ಕಮತ ಹೇಳಿದರು.

ಇಲ್ಲಿಯ ಶಿವಬೋಧರಂಗ ಮಠದಲ್ಲಿ ಗೋಶಾಲೆಯಲ್ಲಿ ಪಶುಪಾಲನಾ ಇಲಾಖೆ ಹಾಗೂ ಪಶು ವೈದ್ಯಕೀಯ ಸೇವಾ ಇಲಾಖೆಯಿಂದ ಜರುಗಿದ ಉಚಿತ ಕಾಲುಬಾಯಿ ರೋಗ ಅಭಿಯಾನದ ಚಾಲನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ದೇಶದ ಮತ್ತು ಕೃಷಿ ಪ್ರಗತಿಯಲ್ಲಿ ಪಶುಗಳ ಮತ್ವದವಿದೆ. ಪಶುಗಳನ್ನು ಮಾನವರಂತೆ ಕಾಳಜಿವಹಿಸುವುದು ಅವಶ್ಯವಿದೆ ಎಂದರು.



ಕಾಲುಬಾಯಿ ರೋಗವು ವೈರಾಣುವಿನಿಂದ ಬರುವ ರೋಗವಾಗಿದೆ. ರೋತ ಪೀಡಿತ ಜಾನುವಾರುಗಳಲ್ಲಿ ವಿಪರೀತವಾದ ಜ್ವರ, ಬಾಯಲ್ಲಿ ಹುಣ್ಣು, ಜೊಲ್ಲು ಸೋರುವಿಕೆ ಮತ್ತು ಕಾಲುಗಳಲ್ಲಿ ಹುಣ್ಣಾಗುತ್ತವೆ. ಇದರಿಂದ ಹಾಲು ಉತ್ಪಾದನೆ ಕುಂಠಿತವಾಗುತ್ತದೆ ಮತ್ತು ಅವುವಗಳಲ್ಲಿ ಕಾರ್ಯಕ್ಷಮತೆ ಕ್ಷೀಣ ಸುತ್ತದೆ ಎಂದರು.

ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ಎಸ್.ಎಸ್. ರೊಡ್ಡನವರ ಹಸುವಿಗೆ ಕಾಲುಬಾಯಿ ಬೇನೆಯ ಲಸಿಕೆಯನ್ನು ಹಾಕುವುದರ ಮೂಲಕ 9ನೇ ಸುತ್ತಿನ ಅಭಿಯಾನಕ್ಕೆ ಚಾಲನೆ ನೀಡಿದರು.

ಡಾ. ಪ್ರಶಾಂತ ಕುರಬೇಟ, ಎಸ್.ಪಿ. ಆದಪ್ಪಗೋಳ, ಎಸ್.ಜಿ. ಮಿಲಾನಟ್ಟಿ, ಮಹಾಂತೇಶ ಹೊಸೂರ, ಸರಸ್ವತಿ ಮುರಗೋಡ ಹಾಗೂ ಲಸಿಕಾ ಸಿಬ್ಬಂದಿಯವರು ಇದ್ದರು.

# ಚಿತ್ರದುರ್ಗದಲ್ಲಿ ಮೇ 9ಕ್ಕೆ ಯಡಿಯೂರಪ್ಪ ಅಭಿಮಾನೋತ್ಸವ: 20 ಲಕ್ಷ ಜನ ಸೇರುವ ನಿರೀಕ್ಷೆ :ಮಾಜಿ ಎ.ಎಸ್. ಪಾಟೀಲ ನಡಹಳ್ಳಿ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ರೈತ ನಾಯಕ ಬಿ.ಎಸ್.ಯಡಿಯೂರಪ್ಪನವರು ರಾಜಕೀಯ ಜೀವನದಲ್ಲಿ 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಮೇ 9ರಂದು ಬೆಳಗ್ಗೆ11 –00 ಗಂಟೆಗೆ ಚಿತ್ರದುರ್ಗದಲ್ಲಿ ರಾಜ್ಯಮಟ್ಟದ ಬೃಹತ್ ಯಡಿಯೂರಪ್ಪನವ ಅಭಿಮಾನೋ ತ್ಸವ ಹಮ್ಮಿಕೊಳ್ಳಲಾಗಿದೆ. ಈ ಸಮಾವೇಶಕ್ಕೆ ರಾಜ್ಯದಾದ್ಯಂತ 15 ರಿಂದ 20 ಲಕ್ಷ ಅಭಿಮಾನಿಗಳು ಸೇರುವ ನಿರೀಕ್ಷೆಯಿದೆ," ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಹಾಗೂ ಮಾಜಿ ಶಾಸಕ ಎ.ಎಸ್. ಪಾಟೀಲ ನಡಹಳ್ಳಿ ಹೇಳಿದರು.

ರವಿವಾರ ಸಂಜೆ ಪಟ್ಟಣದ ತಮ್ಮ ದಾಸೋಹ ನಿಲಯದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, "ಯಡಿಯೂರಪ್ಪನವರು ಪುರಸಭೆ ಅಧ್ಯಕ್ಷರಾಗಿ, ಶಾಸಕರಾಗಿ, ಮುಖ್ಯಮಂತ್ರಿಯಾಗಿ ಸುದೀರ್ಘ ಕಾಲ ಜನಸೇವೆ ಮಾಡಿದ್ದಾರೆ. ರೈತರಿಗೆ ಬೆಲೆ ಸಿಗದಿದ್ದಾಗ ಏಕಾಂಗಿಯಾಗಿ ಹೋರಾಡಿ ಪಾದಯಾತ್ರೆ ಮೂಲಕ ವಿಧಾನಸೌಧಕ್ಕೆ ರೈತರ ಧ್ವನಿ ತಲುಪಿಸಿದ ಮಹಾನ್ ನಾಯಕರು ಅವರು. ಇಂತಹ ನಾಯಕನ ಗೌರವಾರ್ಥವಾಗಿ ಎಲ್ಲಾ ಮಠಾಧೀಶರು ಹಾಗೂ ಪಕ್ಷಾತೀತವಾಗಿ ಅಭಿಮಾನಿಗಳು ಈ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ," ಎಂದರು.

ಯಡಿಯೂರಪ್ಪನವರ ಕಾರ್ಯವೈಖರಿ ಮತ್ತು ಅವರ ಹೋರಾಟದ ಬದುಕನ್ನು ಸ್ವತಃ ಸಿದ್ದರಾಮಯ್ಯನವರೇ ಹೊಗಳಿ ಮಾತನಾಡಿದ್ದಾರೆ. ಸದನದಲ್ಲಿ ಹಾಗೂ ಸಾರ್ವಜನಿಕವಾಗಿ ಯಡಿಯೂರಪ್ಪನವರ ಸಂಘಟನಾ ಶಕ್ತಿಯನ್ನು ಸಿದ್ದರಾಮಯ್ಯನವರು ಶ್ಲಾಘಿಸಿರುವುದು ಅವರ ವ್ಯಕ್ತಿತ್ವಕ್ಕೆ ಹಿಡಿದ ಕನ್ನಡಿಯಾಗಿದೆ. ಕರ್ನಾಟಕದಲ್ಲಿ ಹಜ್ ಭವನ ನಿರ್ಮಿಸುವ ಮೂಲಕ ಸರ್ವ ಧರ್ಮೀಯರನ್ನು ಸಮಾನವಾಗಿ ಕಂಡಿದ್ದನ್ನು ವಿರೋಧ ಪಕ್ಷದ ನಾಯಕರೂ ಮೆಚ್ಚಿಕೊಂಡಿದ್ದಾರೆ," ಎಂದು ನಡಹಳ್ಳಿ ಈ ಸಂದರ್ಭದಲ್ಲಿ ನೆನಪಿಸಿದರು.

ಯಡಿಯೂರಪ್ಪನವರ ಮುಖ್ಯಮಂತ್ರಿ ಅವಧಿಯಲ್ಲಿ ಭಾಗ್ಯಲಕ್ಷ್ಮಿ ಬಾಂಡ್, ಶೂನ್ಯ ಬಡ್ಡಿ ದರದಲ್ಲಿ ಸಾಲ, ನೇಕಾರರಿಗೆ ವಿದ್ಯುತ್ ಸಬ್ಸಿಡಿ ಹಾಗೂ ವಿಜಯಪುರ ಜಿಲ್ಲೆಯ 124 ಕೆರೆ ತುಂಬಿಸುವ ಯೋಜನೆ ಮತ್ತು ಚಿಮ್ಮಲಗಿ ಏತನೀರಾವರಿ ಯೋಜನೆಗಳಿಗೆ ಸಾವಿರಾರು ಕೋಟಿ ಅನುದಾನ ನೀಡಲಾಗಿದೆ. ಮುದ್ದೇಬಿಹಾಳ ತಾಲ್ಲೂಕಿನಿಂದ ಹೆಚ್ಚಿನ ಸಂಖ್ಯೆಯ ಜನರು ಈ ಕಾರ್ಯಕ್ರಮಕ್ಕೆ ತೆರಳಲಿದ್ದಾರೆ. "ನನಗೆ ಬಿಜೆಪಿ ಟಿಕೆಟ್ ನೀಡಿ, ನಿಗಮದ ಅಧ್ಯಕ್ಷರನ್ನಾಗಿ ಮಾಡಿ ಬೆಳೆಸಿದ ಯಡಿಯೂರಪ್ಪನವರನ್ನು ನಾನು ಎಂದಿಗೂ ಮರೆಯುವುದಿಲ್ಲ," ಎಂದು ಕೃತಜ್ಞತೆ ಸಲ್ಲಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಹಿರಿಯ ಮುಖಂಡರಾದ ಪ್ರಭು ಕಡಿ, ಎಂ.ಎಸ್. ಪಾಟೀಲ, ಮಲಕೇದ್ರಗೌಡ ಪಾಟೀಲ, ಕೆಂಚಪ್ಪ ಬಿರಾದಾರ,ಚನ್ನಬಸಪ್ಪ ಚೆನ್ನಿಗಾವಿಶೆಟ್ರು, ಮಲ್ಲಯ್ಯ ಬಿರಾದಾರ, ಗೀರಿಶಗೌಡ ಪಾಟೀಲ,ಮದನಸ್ವಾಮಿ ಹಿರೇಮಠ,ಮುತ್ತುಣ್ಣ ಹುಗಿ,ಪ್ರೇಮಸಿಂಗ್ ರಾಠೋಡ, ಸೋಮಗೌಡ ಬಿರಾದಾರ, ಮಹಾಂತಗೌಡ ಗಂಗನಗೌಡರ,ವಿರೇಶ ಪಾಟೀಲ, ಸಿದ್ದರಾಜ ಹೊಳಿ, ಸಂಗನಗೌಡ ಪಾಟೀಲ, ಸಂಗಮ್ಮ ದೇವರಳ್ಳಿ, ಗೌರಮ್ಮ ಹುನಗುಂದ, ರೇಖಾ ಕೊಂಡಗೂಳಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಶಾಂತಿ, ಕರುಣೆ ಮತ್ತು ಅಹಿಂಸೆಯ ಸಂದೇಶವನ್ನು ವಿಶ್ವಕ್ಕೆ ಸಾರಿದ ಗೌತಮ ಬುದ್ಧನ ಜಯಂತಿ ಹಾಗೂ ಬುದ್ಧ ಪೂರ್ಣಿಮೆಯ ಅಂಗವಾಗಿಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜ್ಞಾನದ ಬೆಳಕನ್ನು ಪಸರಿಸಿ, ಶಾಂತಿ ಮಂತ್ರವ ಬೋಧಿಸಿದ ಮಹಾಜ್ಞಾನಿ, ಭಗವಾನ್ ಗೌತಮ ಬುದ್ಧ ಭಾವಚಿತ್ರಕ್ಕೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಸದಸ್ಯರು ಮಾಲಾರ್ಪಣೆ ಮಾಡಿ ಗೌರವದಿಂದ ಶ್ರದ್ಧಾ ಭಕ್ತಿಯಿಂದ ಪ್ರಣಾಮಗಳನ್ನು ಸಲ್ಲಿಸಿದರು. ಭಗವಾನ್ ಗೌತಮ ಬುದ್ಧನ ಆಶೀರ್ವಾದ ಸದಾವಕಾಲ ಭಕ್ತರ ಮೇಲೆ ಇರಲಿ ಎಂದು ಆಶಯ ವ್ಯಕ್ತಪಡಿಸಿದರು. ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಶಾಕೀರ್ ಸನದಿ, ಸೋಹನ ಸುರೇಶ ಹೊರಕೇರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾಯರ್ದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಗ್ರಂಥಪಾಲಕ ಮಾರುತಿ ತಳಗೇರಿ, ಗಣ್ಯರು, ಮುಂತಾದವರು ಇದ್ದರು.

# ಕೊಟ್ಟ ಮಾತಿಗೆ ತಪ್ಪಿದ ಅಧಿಕಾರಿಗಳು; ನ್ಯಾಯ ಸಿಗುವವರೆಗೂ ನಿವಾಸಿಗಳು ಹೋರಾಟ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಆನೆ ನಡೆದದ್ದೇ ಹಾದಿ ಎಂಬಂತೆ ವರ್ತಿಸುತ್ತಿರುವ ಅಧಿಕಾರಿಗಳ ಧೋರಣೆಯಿಂದ ಬೇಸತ್ತ ಮುದ್ದೇಬಿಹಾಳ ಪಟ್ಟಣದ ಇಂದಿರಾ ನಗರದ ನಿವಾಸಿಗಳು, ತಮ್ಮ ಮನೆಗಳ ಹಕ್ಕು ಪತ್ರಕ್ಕಾಗಿ ಹೂಡಿರುವ ಹೋರಾಟ ಮಂಗಳವಾರ ಎರಡನೇ ದಿನಕ್ಕೆ ಕಾಲಿಟ್ಟಿದೆ. ತಹಶೀಲ್ದಾರ್ ಕಚೇರಿ ಆವರಣ ಈಗ ಬಡವರ ಆಕ್ರೋಶ ವ್ಯಕ್ತಪಡಿಸಿದರು.

**ಲಿಖಿತ ಭರವಸೆ ಈಗ ಕೇವಲ ಕಾಗದದ ಚೂರು!**

ಕಳೆದ ಡಿಸೆಂಬರ್ 24, 2025ರಂದು ಗಡಗಡ ನಡುಗುವ ಚಳಿಯಲ್ಲೂ ನಿವಾಸಿಗಳು ಅನಿರ್ದಿಷ್ಟಾವಧಿ ಧರಣಿ ಆರಂಭಿಸಿದಾಗ, ಪರಿಸ್ಥಿತಿಯ ಗಂಭೀರತೆ ಅರಿತ ತಹಶೀಲ್ದಾರರು ಮತ್ತು ಪುರಸಭೆ ಮುಖ್ಯಾಧಿಕಾರಿಗಳು ಸ್ಥಳಕ್ಕೆ ಧಾವಿಸಿದ್ದರು. "ಕೊಳಚೆ ನಿರ್ಮೂಲನಾ ಮಂಡಳಿಯಿಂದ ಸರ್ವೆ ಮಾಹಿತಿ ತರಿಸಿ, ಮೂರು ತಿಂಗಳೊಳಗೆ ಪುರಸಭೆ ಸಾಮಾನ್ಯ ಸಭೆಯಲ್ಲಿ ನಿರ್ಣಯ ಕೈಗೊಂಡು ಉತಾರೆ ನೀಡಲಾಗುವುದು" ಎಂದು ಅಧಿಕೃತವಾಗಿ ಲಿಖಿತ ಭರವಸೆ ನೀಡಿದ್ದರು (ಪ.ಸಂ.: ಪುಸಮು/ಮಾಹ/2025–26/238). ಆದರೆ, ಐದು ತಿಂಗಳು ಕಳೆದರೂ ಅಧಿಕಾರಿಗಳು ತಮ್ಮ ಭರವಸೆಯ ಹತ್ತಿರವೂ ಸುಳಿಯದಿರುವುದು ಈಗ ಜನಾಕ್ರೋಶಕ್ಕೆ ಕಾರಣವಾಗಿದೆ.

ಧರಣಿ ನಿರತ ನಿವಾಸಿಗಳು ಅಧಿಕಾರಿಗಳ ವಿರುದ್ಧ ಘೋಷಣೆ ಕೂಗುತ್ತಾ, "ನಮ್ಮನ್ನು ಕೇವಲ ಮತ ಕೇಳುವಾಗ ಮಾತ್ರ ನೆನಪಿಸಿಕೊಳ್ಳುವ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳಿಗೆ ನಮ್ಮ ಬದುಕಿನ ಬವಣೆ ಅರ್ಥವಾಗುತ್ತಿಲ್ಲವೇ? ಉತಾರೆ ಇಲ್ಲದೆ ಬ್ಯಾಂಕ್ ಸಾಲ ಸಿಗುತ್ತಿಲ್ಲ, ಮನೆ ದುರಸ್ತಿಗೆ ಅವಕಾಶವಿಲ್ಲ. ಸರ್ಕಾರದ ಸೌಲಭ್ಯಗಳಿಂದ ನಮ್ಮನ್ನು ವಂಚಿತರನ್ನಾಗಿ ಮಾಡಿ ಅಧಿಕಾರಿಗಳು ಮಜಾ ಮಾಡುತ್ತಿದ್ದಾರೆ" ಎಂದು ಕಿಡಿಕಾರಿದ್ದಾರೆ.




ಧರಣಿ ಸ್ಥಳದಲ್ಲಿ ಶಾಂತಿಯುತವಾಗಿ ಸತ್ಯಾಗ್ರಹ ನಡೆಸುತ್ತಿರುವ ನಿವಾಸಿಗಳು, ಈ ಬಾರಿ ಅಧಿಕಾರಿಗಳ ಯಾವುದೇ ಪೊಳ್ಳು ಭರವಸೆಗಳಿಗೆ ಮಣಿಯುವುದಿಲ್ಲ ಎಂದು ಪಟ್ಟು ಹಿಡಿದಿದ್ದಾರೆ. "ನಮ್ಮ ಕೈಗೆ ಮನೆ ಉತಾರೆ ಸೇರುವವರೆಗೂ ಹೋರಾಟದ ಸ್ಥಳದಿಂದ ಅಲುಗಾಡುವುದಿಲ್ಲ"ಲ ಎಂದು ಘೋಷಿಸಿದ್ದಾರೆ.

ಈ ಸತ್ಯಾಗ್ರಹದಲ್ಲಿ ರಿಯಾಜ್ ಇಸ್ಮಾಯಿಲ್‌ಸಾಬ್ ಉಣ್ಣಿಬಾವಿ, ಶ್ರೀ ವಿಷ್ಣು ಗಂಗಾಪೂರ, ಬಸವರಾಜ ಕೋಳೂರ, ಮಹಿಬೂಬ ಮುಲ್ಲಾ, ರಾಜು ವಡ್ಡರ, ನಾಗೇಶ ಜಾಧವ್, ಮಹಿಬೂಬು ಮೊಕಾಶಿ, ಮಂಜುನಾಥ ಚಲವಾದಿ, ಬುಡ್ಡಾ ನಿಡಗುಂದಿ, ನಾರಾಯಣ ಮಿರಜಕರ, ಅಂಬ್ರೇಶ ಉಪ್ಪಲದಿನ್ನಿ, ಬಸವರಾಜ ಗುಂಡಕರ್ಜಗಿ, ಸೇರಿದಂತೆ ಇಂದಿರಾ ನಗರ ಹಾಗೂ ಪೀಲೆಕಮ್ಮ ನಗರದ ನೂರಾರು ನಿವಾಸಿಗಳ ಪಾಲ್ಗೊಂಡು ಅಧಿಕಾರಿಗಳ ನಿದ್ದೆಗೆಡಿಸಿದ್ದಾರೆ.

# ಜಿಟಿಟಿಸಿ: ಡಿಪ್ಲೋಮಾ ಕೋರ್ಸುಗಳಿಗೆ ಅರ್ಜಿ ಆಹ್ವಾನ

ಕೊಪ್ಪಳ: ಕೊಪ್ಪಳ ಜಿಲ್ಲೆಯ ದದೇಗಲ್‌ನ ಸರಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ)ಯಲ್ಲಿ 2026–27ನೇ ಶೈಕ್ಷಣಿಕ ಸಾಲಿಗೆ ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಿಗಾಗಿ ಡಿಪ್ಲೋಮಾ ಕೋರ್ಸುಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಎಸ್.ಎಸ್.ಎಲ್.ಸಿ., ಪಿಯುಸಿ ಅಥವಾ ಐಟಿಐ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಿಗೆ 3+1 ವರ್ಷ ಅವಧಿಯ ಡಿಪ್ಲೋಮಾ ಕೋರ್ಸಗಳಾದ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೋಮಾ ಇನ್ ಮೆಕ್ಯಾಟ್ರಾನಿಕ್ಸ್ ಹಾಗೂ ಡಿಪ್ಲೋಮಾ ಇನ್ ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಶನ್ ಕೋರ್ಸುಗಳಿಗೆ ಮೆರಿಟ್ ಕಮ್ ರೋಸ್ಟರ್ ಆಧಾರದ ಮೇಲೆ ಪ್ರಥಮ ಸೆಮಿಸ್ಟರ್ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು http://gttc-hrms.karnataka.gov.in/ಚಿಜಚ್ಝಿಂಟಿ ಮೂಲಕ ಮೇ 10 ರೊಳಗಾಗಿ ಆನ್‌ಲೈನ್ ಅರ್ಜಿಯನ್ನು ಸಲ್ಲಿಸಬಹುದು. ಜೊತೆಗೆ, ಸರಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ಗದಗ ರಸ್ತೆ, ದದೇಗಲ್, ಕೊಪ್ಪಳ ಇಲ್ಲಿ ಖುದ್ದಾಗಿ ಭೇಟಿ ನೀಡಿ ಸಹ ಮಾಹಿತಿಯನ್ನು ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯ ಅಥವಾ ಮೌನೇಶ್ ರಾಥೋಡ್, ವಿಭಾಗದ ಮುಖ್ಯಸ್ಥರು, ಜಿಟಿಟಿಸಿ ದದೇಗಲ್, ಕೊಪ್ಪಳ ಇವರನ್ನು ದೂರವಾಣಿ ಸಂಖ್ಯೆ 7507094445, 9986088894 ಇವರನ್ನು ಸಂಪರ್ಕಿಸಬಹುದು ಜಿಟಿಟಿಸಿ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾತ್ರಾ ಮಹೋತ್ಸವಕ್ಕೆ ಚಾಲನೆ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ನಗರದ ಅರವಿಂದನಗರದ ಶ್ರೀ ಹುಲಿಗೆಮ್ಮದೇವಿ ದೇವಸ್ಥಾನದಲ್ಲಿ ಮಹಾಪೌರರಾದ ಜ್ಯೋತಿ ಪಾಟೀಲ ಅವರು ಜಾತ್ರಾಮಹೋತ್ಸವಕ್ಕೆ ಚಾಲನೆ ನೀಡಿದರು. ಜಾತ್ರಾಮಹೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜೀವನದಲ್ಲಿ ಕಷ್ಟ ಸುಖಗಳು ಬರುವುದು ಸಾಮಾನ್ಯ, ಸುಖ ಬಂದಾಗ ಹಿಗ್ಗದೆ ಕಷ್ಟಗಳು ಬಂದಾಗ ಕುಗ್ಗದೆ ಎರಡನ್ನು ಸಮಾನವಾಗಿ ಸ್ವೀಕರಿಸಬೇಕು ಎಂದರು.

ಲೋಕದೆಲ್ಲೆಡೆ ಶಾಂತಿ ನೆಲೆಸಿ ಸಮೃದ್ಧಿಯಾಗಲಿ ಎಂದು ಪ್ರಾರ್ಥಿಸಿ ಮಹಾಮಂಗಳಾರತಿ ನೆರವೇರಿಸಲಾಯಿತು. ನಂತರ ಪ್ರಸಾದವನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ತೋಟಪ್ಪ ನಿಡಗುಂದಿ, ಮಹೇಶ ದಾಬಡೆ, ಸುರೇಶ ಪೂಜಾರಿ, ಎಚ್.ಪಿ. ಧೂಪದ, ಗುರು ಬನ್ನಿಕೊಪ್ಪ ನಾಗರಾಜ ಕತ್ರಿಮಲ್, ನಾರಾಯಣಸಿಂಗ್ ರಜಪೂತ, ಬಸವಂತಪ್ಪ ಅನವಾಲ, ನಾಗೇಶ್ ಡೊಂಗರೆ, ಯಲ್ಲಪ್ಪ ಕೋಸಗಿ, ದೇವೇಂದ್ರ ಪಾಂಡವ, ಶಿವರಾಜ ಪುಸಲೂರ, ಶ್ರೀಧರ ಕೋಪರ್ಡೆ, ಶ್ರೀಮತಿ ಪಾರ್ವತಿದೇವಿ ಪಾಟೀಲ, ರಜನಿ ದೇಶಪಾಂಡೆ, ಅನುಪಮಾ ಅಕ್ಕೂರ, ಶ್ರೀದೇವಿ ಧೂಪದ, ಶೈಲಜಾ ಹಳ್ಳಿಕೇರಿ, ಪದ್ಮಾ ದಿವಟೆ, ಲತಾ ಹಳ್ಳಿಕೇರಿ, ಕೋಮಲ ಮುಗಳೆ, ಪೂರ್ಣಿಮಾ ಕ್ಷೀರಸಾಗರ, ದೇವಸ್ಥಾನದ ಪ್ರಧಾನ ಅರ್ಚಕ ರವಿಕುಮಾರ ಮಡ್ಡಿ ಮತ್ತಿತರರು ಇದ್ದರು.

# ಸಿದ್ದರಾಮಯ್ಯ ಸರ್ಕಾರದ ಅಭಿವೃದ್ಧಿಗೆ ಜನರ ಬೆಂಬಲ: ಎರಡು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಭರ್ಜರಿ ಜಯ: ಎಂ.ಆರ್. ಕಲಾದಗಿ



**ಬೆಳಗಾವಿ ವಾರ್ತೆ ಕೊಲ್ಹಾರ:** ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟ ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ಗೆಲವು ಸಾಧಿಸಿದ ಹಿನ್ನೆಲೆಯಲ್ಲಿ ಪಟ್ಟಣದ ಗಾಂಧೀಜಿ ಸರ್ಕಲ್ ನಲ್ಲಿ ಸೋಮವಾರ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಪಟಾಕಿ ಸಿಡಿಸಿ, ಪರಸ್ಪರ ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು.

ಎರಡು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಗೆಲುವು ಸಾಧಿಸುತ್ತಿದ್ದಂತೆ ಗಾಂಧೀಜಿ ಸರ್ಕಲ್ ಬಳಿ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಜಮಾಯಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ , ಸಚಿವ ಶಿವಾನಂದ ಪಾಟೀಲರ ಘೋಷಣೆ ಕೂಗಿದರು.

ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್ ಬಿ ಪಕಾಲಿ ಮಾತನಾಡಿ, ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟ ಎರಡು ವಿಧಾನಸಭಾ ಕ್ಷೇತ್ರಗಳ ಮತದಾರರು ಕಾಂಗ್ರೆಸ್ ಪಕ್ಷದ ತತ್ವ ಸಿದ್ಧಾಂತಗಳನ್ನು ಮೆಚ್ಚಿ ನಮ್ಮ ಮೇಲೆ ನಂಬಿಕೆ ಇಟ್ಟು ಮತ ನೀಡಿ ಅಭೂತ ಪೂರ್ವ ಗೆಲವು ತಂದುಕೊಡಲು ಕಾರಣರಾಗಿದ್ದಾರೆ ಹೀಗಾಗಿ ಕಾಂಗ್ರೆಸ್ ಪಕ್ಷದ ಪರವಾಗಿ ಎರಡು ಕ್ಷೇತ್ರದ ಮತದಾರ ಪ್ರಭುಗಳಿಗೆ ಕೊಲ್ಹಾರ ಬ್ಲಾಕ್ ಕಾಂಗ್ರೆಸ್ ಪಕ್ಷದ ವತಿಯಿಂದ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದರು.

ಇನ್ನೋರ್ವ ಕಾಂಗ್ರೆಸ್ ಮುಖಂಡ ಎಂ ಆರ್ ಕಲಾದಗಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಪಕ್ಷದ ಸರ್ಕಾರ ಕೊಟ್ಟ ಕೊಡುಗೆಗಳೇ ಇಂದು ರಾಜ್ಯದ ಎರಡು ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಗೆಲ್ಲಲು ಕಾರಣವಾಗಿದೆ . ಕಾಂಗ್ರೆಸ್ ಪಕ್ಷ ಯಾವತ್ತೂ ಜನರ ಪರ ಇರುತ್ತದೆ ಎನ್ನುವುದಕ್ಕೆ ಇವೆರಡು ಫಲಿತಾಂಶಗಳೇ ಕಾರಣ ಎಂದರು.

ಪಟ್ಟಣ ಪಂಚಾಯತಿ ಸದಸ್ಯ ತೌಸಿಪ ಗಿರಗಾಂವಿ ಮಾತನಾಡಿ, ನಮ್ಮ ಕಾಂಗ್ರೆಸ್ ಪಕ್ಷದ ಶಾಸಕರ ನಿಧನದಿಂದ ತೆರವಾಗಿದ್ದ ಕ್ಷೇತ್ರಗಳಿಗೆ ನಡೆದ ಉಪ ಚುನಾವಣೆಯಲ್ಲಿ ಎರಡು ಕ್ಷೇತ್ರಗಳಲ್ಲಿ ನಾವು ಗೆಲುವು ಸಾಧಿಸಲು ಪಂಚ ಗ್ಯಾರಂಟಿಗಳು ಕೈಹಿಡಿದಿವೆ. ಕೇರಳದಲ್ಲಿ ಸಿದ್ದರಾಮಯ್ಯನವರು,ಡಿ ಕೆ ಶಿವಕುಮಾರವರು ಹಾಗೂ ಜಮೀರ್ ಅಹ್ಮದ್ ರವರು ಭರ್ಜರಿ ಪ್ರಚಾರ ಮಾಡಿದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷ ಜಯಭೇರಿ ಗಳಿಸಿದೆ. ಹೀಗಾಗಿ ಅಲ್ಲಿನ ಮತದಾರರಿಗೂ ಧನ್ಯವಾದಗಳನ್ನು ಸಲ್ಲಿಸಿದರು.

ಈ ವೇಳೆ ಪಟ್ಟಣ ಪಂಚಾಯತಿ ಸದಸ್ಯ ಶ್ರೀಶೈಲ ಮುಳವಾಡ ಮಾತನಾಡಿದರು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಚನ್ನಮಲ್ಲಪ್ಪ ಗಿಡ್ಡಪ್ಪಗೊಳ, ವಿಜಯಪುರ ಜಿಲ್ಲಾ ಅಸಂಘಟಿತ ಕಾರ್ಮಿಕರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮಹ್ಮದಹನೀಫ ಮಕಾನದಾರ, ಮುಖಂಡರಾದ ಬನಪ್ಪ ಬಾಲಗೊಂಡ, ದಶರಥ ಈಟಿ, ಇಕ್ಬಾಲ್ ನದಾಪ, ದಸ್ತಗೀರ ಕಲಾದಗಿ, ರಾಜು ಇವಣಗಿ, ಯಮನಪ್ಪ ಮಾಕಾಳೆ, ಸಿಡ್ಲೆಪ್ಪ ತಳಗೇರಿ , ಅಬ್ದುಲ ರಜಾಕ್ ಪಕಾಲಿ, ಅನ್ವರ್ ಕಂಕರಪೀರ , ಸೇರಿದಂತೆ ಅನೇಕರು ಇದ್ದರು.

# ಜಿಲ್ಲಾ ಉಸ್ತುವಾರಿ ಸಚಿವರಿಂದ ನಾನಾ ಅಭಿವೃದ್ಧಿ ಕಾಮಗಾರಿಗೆ ಚಾಲನೆ

**ಬೆಳಗಾವಿ ವಾರ್ತೆ ವಿಜಯಪುರ:** ನಗರದಲ್ಲಿ ಸೋಮವಾರ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಬಿ.ಪಾಟೀಲ ಅವರು ಚಾಲನೆ ನೀಡಿದರು. ಬೆಳಿಗ್ಗೆ 10 ಗಂಟೆಗೆ ಗೋಲ್ ಗುಂಬಜ್ ನಿಂದ ಹಕೀಮ್ ಚೌಕ್ ವರೆಗೆ 2 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿದರು. ಬಳಿಕ ವಾರ್ಡ್ ನಂ.18 ರಲ್ಲಿ 2 ಕೋಟಿ ರೂ. ವೆಚ್ಚದಲ್ಲಿ ಪರಿಶಿಷ್ಟ ವರ್ಗಗಳ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಹಾಗೂ ಹರಣಶಿಖಾರಿ ಓಣಿಯಲ್ಲಿ ರಸ್ತೆ ಸುಧಾರಣೆ ಕಾಮಗಾರಿಗೆ ಚಾಲನೆ ನೀಡಿದರು. ಅಲ್ಲಿಂದ ನೇರವಾಗಿ ಕಾಸಗೇರಿ ಖಾದಿ ಗ್ರಾಮೋದ್ಯೋಗ ಮಾರ್ಗವಾಗಿ ಮುಬೀನ್ ಸರ್ಕಲ್ ಅಥಣಿ ಗಲ್ಲಿ ಮುಖಾಂತರ ಕೇಂದ್ರ ಬಸ್ ನಿಲ್ದಾಣವರೆಗೆ ಒಳಚರಂಡಿ, ಮಳೆ ನೀರು ಚರಂಡಿ, ಅಲಂಕಾರಿಕ ಬೀದಿ ದೀಪ ಅಳವಡಿಸಿ ರಸ್ತೆ ಅಭಿವದ್ಧಿಪಡಿಸುವ ಕಾಮಗಾರಿಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ನಾಗಠಾಣ ಶಾಸಕ ವಿಠ್ಠಲ ಕಟಕದೊಂಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಗಂಗಾಧರ ಸಂಬಣ್ಣಿ ಮಹಾಪೌರ ಎಂ.ಎಸ್. ಕರಡಿ, ಪಾಲಿಕೆ ಸದಸ್ಯರು,ಪಾಲಿಕೆ ಆಯುಕ್ತರಾದ ವಿಜಯಕುಮಾರ ಮೆಕ್ಕಳಕಿ ಸೇರಿದಂತೆ ಅಧಿಕಾರಿಗಳು ಹಾಗೂ ಸಾರ್ವಜನಿಕರು ಇದ್ದರು.



# ವಿವಿಧ ವೃತ್ತಿಗಳ ತರಬೇತಿಗಾಗಿ ಅರ್ಜಿ ಆಹ್ವಾನ

ಧಾರವಾಡ: ಹುಬ್ಬಳ್ಳಿ ವಿದ್ಯಾನಗರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಒಟ್ಟು 810 ಸ್ಥಾನಗಳಿಗೆ ಐಟಿಐ ತರಬೇತಿ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಎಸ್.ಎಸ್.ಎಲ್.ಸಿ ಉತ್ತೀರ್ಣ, ಅನುತ್ತೀರ್ಣ ಅಭ್ಯರ್ಥಿಗಳು www.cite.karnataka.gov.in ಮೂಲಕ ಮೇ 8, 2026 ರೊಳಗಾಗಿ ಅರ್ಜಿ ಸಲ್ಲಿಸಬಹುದು.

ಸಂಸ್ಥೆಯಲ್ಲಿ ಸಂಸ್ಥೆಯಲ್ಲಿ ಇಲೆಕ್ಟ್ರಿಷಿಯನ್, ಪಿಟ್ಟರ್, ಇಲೆಕ್ಟ್ರಾನಿಕ್ ಮೆಕ್ಯಾನಿಕ್, ಆರ್.ಎ.ಸಿ.ಟಿ, ಮೆಕ್ಯಾನಿಕ್ ಇಲೆಕ್ಟ್ರಿಕ್ ವೇಹಿಕಲ್, ಅಡ್ವಾನ್ಸ ಮ್ಯಾನ್ಯುಫ್ಯಾಕ್ಚರಿಂಗ್, ರೋಬೊಟಿಕ್ಸ ಟೆಕ್ನಾಲಜಿ, ಎಮ್.ಪಿ.ಸಿ.ಎ, ವಿ.ಎ.ಡಿ, ಎ.ಯು.ಎ.ಟಿ, ಎಂ.ಎಂ.ವಿ, ಸಿ.ಹೆಚ್.ಎನ.ಎಂ, ಕೋಪಾ, ಡೆಇ.ಎಂ.ಸಿ, ಐ.ಸಿ.ಟಿ.ಎಸ್.ಎಂ, ಎಂ.ಎ.ಬಿ.ಆರ್, ಮಷಿನಿಷ್ಟ್, ಗ್ರೈಂಡರ್., ಎಂ.ಡಿ. ಎಸ್.ಎಂ.ಡಬ್ಲ್ಯೂ., ಸ್ಟೆನೋಗ್ರಫಿ, ಟರ್ನರ್, ವೆಲ್ಡರ್ ವೃತ್ತಿಗಳಿದ್ದು ಇದರ ಸದುಪಯೋಗ ಪಡೆದುಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ:9986726384, 7411380520 ಸಂಪರ್ಕಿಸಬಹುದು ಎಂದು ಹುಬ್ಬಳ್ಳಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ 8ರಂದು ವಿಜಯಪುರದಲ್ಲಿ ಬೃಹತ್ ರೈತ ಸಮಾವೇಶ: ಲಕ್ಷ ರೈತರ ಪಾಲ್ಗೊಳ್ಳುವಿಕೆ ನಿರೀಕ್ಷೆ – ಶಾಂತಗೌಡ ಪಾಟೀಲ ನಡಹಳ್ಳಿ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ದೇಶದ ಬೆನ್ನೆಲುಬಾದ ರೈತ ಇಂದು ಸಾಲ ಮತ್ತು ಆತ್ಮಹತ್ಯೆಯ ಸಂಕೋಲೆಯಲ್ಲಿ ಸಿಲುಕಿ ನಲುಗುತ್ತಿದ್ದಾನೆ. ರೈತರ ಬದುಕು ಹಸನಾಗಲು ಬಲಿಷ್ಠ ಸಂಘ ಟನೆ ಅನಿವಾರ್ಯವಾಗಿದ್ದು, ಈ ಹಿನ್ನೆಲೆಯಲ್ಲಿ ಬರುವ ಮೇ 8ರಂದು ವಿಜಯಪುರದಲ್ಲಿ 4ನೇ ಬೃಹತ್ ರೈತ ಜಾಗೃತಿ ಸಮಾ ವೇಶವನ್ನು ಆಯೋಜಿಸಲಾಗಿದೆ," ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಉಪಾಧ್ಯಕ್ಷ ಶಾಂತ ಗೌಡ ಪಾಟೀಲ (ನಡಹಳ್ಳಿ) ಹೇಳಿದರು.

ರವಿವಾರ ಪಟ್ಟಣದ ಪಂಜರಹುಲಿ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಶುಕ್ರವಾರ ಮೇ 8ರಂದು ಬೆಳಿಗ್ಗೆ 10 ಗಂಟೆಗೆ ವಿಜಯಪುರದ ದರಬಾರ್ ಗ್ರೌಂಡ್ ಸ್ಟೇಶನ್ ಮುಖ್ಯ ರಸ್ತೆಯಲ್ಲಿ ಈ ಬೃಹತ್ ಸಮಾವೇಶ ನಡೆಯಲಿದೆ. ರಾಜ್ಯದ ವಿವಿಧ ಮಠಾಧೀಶರು ಹಾಗೂ ವಿವಿಧೆಡೆಯಿಂದ ಸುಮಾರು 1 ಲಕ್ಷ ರೈತರು ಈ ಮಹಾ ಸಂಗಮದಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ. ಮುದ್ದೇಬಿಹಾಳ ತಾಲೂಕಿನ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಮಾವೇಶ ಯಶಸ್ವಿಗೊಳಿಸಬೇಕು," ಎಂದು ಮನವಿ ಮಾಡಿದರು.

"ಸರ್ಕಾರಕ್ಕೆ ಸಕ್ಕರೆ ಕಾರ್ಖಾನೆಗಳಿಂದ ಸ್ಪಿರಿಟ್, ವಿದ್ಯುತ್ ಹಾಗೂ ಮದ್ಯದ ಮೂಲಕ ವರ್ಷಕ್ಕೆ 50 ಸಾವಿರ ಕೋಟಿಗೂ ಅಧಿಕ ಆದಾಯ ಬರುತ್ತಿದ್ದರೂ ರೈತರಿಗೆ ಮಾತ್ರ ನ್ಯಾಯಯುತ ಬೆಲೆ ಸಿಗುತ್ತಿಲ್ಲ. ಕಬ್ಬಿಗೆ ಪ್ರತಿ ಟನ್‌ಗೆ 5,500 ರೂ. ಬೆಲೆ ನೀಡಬೇಕು ಹಾಗೂ ಸ್ವಾಮಿನಾಥನ್ ವರದಿ ಜಾರಿಗೆ ತರಬೇಕು. ಹಿಂದೆ 20 ಸಾವಿರ ರೂ.ಗೆ ಸಿಗುತ್ತಿದ್ದ ಟಿಸಿ ಇಂದು 3 ಲಕ್ಷ ರೂ. ಆಗಿದೆ, ಇದು ರೈತರಿಗೆ ಆಘಾತಕಾರಿ ವಿಷಯವಾಗಿದೆ. ಆಲಮಟ್ಟಿ ಅಣೆಕಟ್ಟನ್ನು 524 ಮೀಟರ್ ಎತ್ತರಕ್ಕೆ ಏರಿಸುವಲ್ಲಿ ಸರ್ಕಾರಗಳು ನಿರ್ಲಕ್ಷ್ಯ ವಹಿಸಿವೆ. ನಾಗರಬೆಟ್ಟದ ಏತನೀರಾವರಿ ಯೋಜನೆ ಶೇ. 90ರಷ್ಟು ಮುಗಿದಿದ್ದರೂ ಇಂದಿಗೂ ಚಾಲನೆ ಸಿಕ್ಕಿಲ್ಲ. ಈ ಯೋಜನೆಗೆ ನೀಡಿದ ಒಂದು ತಿಂಗಳ ಕಾಲಾವಧಿಯೊಳಗೆ ಪೂರ್ಣ ಗೊಳ್ಳದಿದ್ದರೆ, ಆಲಮಟ್ಟಿಯ ಕೆಬಿಜೆ ಎನ್‌ಎಲ್ ಕಚೇರಿ ಹಾಗೂ ಶಾಸಕರ ಮನೆ ಮುಂದೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ರೈತ ಸಂಘದ ರಾಜ್ಯ ಅಧ್ಯಕ್ಷ ಚುನಪ್ಪ ಪೂಜೇರಿ ಮಾತನಾಡಿ, ಸರ್ಕಾರಗಳು ರೈತ ವಿರೋಧಿ ನೀತಿ ಅನುಸರಿಸುತ್ತಿವೆ. ಕಬ್ಬು, ಈರುಳ್ಳಿ, ದ್ರಾಕ್ಷಿ, ದಾಳಿಂಬೆ ಬೆಳೆಗಾರರಿಗೆ ಬೆಂಬಲ ಬೆಲೆ ಸಿಗುತ್ತಿಲ್ಲ. ಹಳ್ಳಿ ಹಳ್ಳಿಗಳಲ್ಲಿ ರೈತ ಸಂಘದ ಶಾಖೆಗಳು ಆರಂಭವಾಗುವ ಮೂಲಕ ಸಂಘಟನೆ ಬಲಗೊಳ್ಳಬೇಕು. ಸಮಾವೇಶದಲ್ಲಿ ರಾಜ್ಯದ 11 ಜನ ಪ್ರಗತಿಪರ ರೈತರಿಗೆ ರಾಜ್ಯ ಮಟ್ಟದ ಪ್ರಶಸ್ತಿ ನೀಡಿ ಗೌರವಿಸಲಾಗುವುದು," ಎಂದರು. ರಾಜ್ಯ ಪ್ರಧಾನ ಕಾರ್ಯದರ್ಶಿ ರಾಹುಲ್ ಕುಬಕಡ್ಡಿ ಹಾಗೂ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಮಾತನಾಡಿ, "ಜಿಲ್ಲೆಯ ಎಲ್ಲಾ ಇಲಾಖೆಗಳಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಕುಡಿಯುವ ನೀರಿನ ಬರ ರೈತರನ್ನು ಕಂಗಾಲಾಗಿಸಿದೆ. ನೀರಾವರಿ ಪ್ರದೇಶದ ಜಮೀನುಗಳಿಗೆ ಬಾಕಿ ಇರುವ ಅವಾರ್ಡ್ ಮೊತ್ತವನ್ನು ಕೂಡಲೇ ರೈತರಿಗೆ ತಲುಪಿಸಬೇಕು ಮತ್ತು ಕೆರೆಗಳ ಅತಿಕ್ರಮಣವನ್ನು ಕಂದಾಯ ಇಲಾಖೆ ಕೂಡಲೇ ತೆರವುಗೊಳಿಸಬೇಕು," ಎಂದು ಆಗ್ರಹಿಸಿದರು.


ಸುದ್ದಿಗೋಷ್ಠಿಯಲ್ಲಿ ತಾಲ್ಲೂಕು ಅಧ್ಯಕ್ಷ ಮಹಾಂತಗೌಡ ಬಿರಾದಾರ (ವಕೀಲರು), ಸೋಮು ಬಿರಾದಾರ, ಮುತ್ತು ಹಿರೇಮಠ, ಅಪ್ಪುಗೌಡ ಪಾಟೀಲ, ಶಿವನಗೌಡ ಗೌಡರ, ಈಶ್ವರ ಬಡಿಗೇರ, ಶಿವರಾಯ ಪ್ಯಾಟಿ ಸೇರಿದಂತೆ ಮುದ್ದೇಬಿಹಾಳ ತಾಲೂಕಿನ ರೈತ ಸಂಘದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಯಾದಗಿರಿಯಲ್ಲಿ ಬಸವ ಶರಣರ ಹಿಂದೂ ಸಮಾವೇಶಕ್ಕೆ ಲಿಂಗಾಯತ ಸಂಘಟನೆಗಳ ವಿರೋಧ

**ಬೆಳಗಾವಿ ವಾರ್ತೆ ಬೆಂಗಳೂರು:** ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನಲ್ಲಿ ಮೇ 19 ರಂದು ನಡೆಯಲಿರುವ 'ಬಸವ ಶರಣ ಹಿಂದೂ ಸಮಾವೇಶ' ಕಾರ್ಯಕ್ರಮಕ್ಕೆ ಪ್ರಮುಖ ಲಿಂಗಾಯತ ಸಂಘಟನೆಗಳು ತೀವ್ರ ವಿರೋಧ ವ್ಯಕ್ತಪಡಿಸಿದೆ. ಇದು ಬಸವಣ್ಣ ಮತ್ತು ಶರಣರ ಮೂಲ ತತ್ವಕ್ಕೆ ವಿರುದ್ಧವಾಗಿದೆ ಜಾಗತಿಕ ಲಿಂಗಾಯತ ಮಹಾಸಭಾ ಆರೋಪಿಸಿದೆ.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಾಗತಿಕ ಲಿಂಗಾಯತ ಮಹಾಸಭಾದ ಅಧ್ಯಕ್ಷ ಆರ್.ಜಿ.ಶಟಗಾರ ಬಸವಣ್ಣನವರ ಸಮಾನತೆ, ಮಾನವೀಯತೆ ಮತ್ತು ಶೋಷಣಾ ವಿರೋಧಿ ಚಿಂತನೆಗಳನ್ನು ಹಿಂದುತ್ವದ ಚೌಕಟ್ಟಿನೊಳಗೆ ಕಟ್ಟಿಹಾಕುವ ಹುನ್ನಾರ ನಡೆಯುತ್ತಿದೆ ಎಂದು ಆರೋಪಿಸಿದರು.

ಶರಣರ ಚಳವಳಿ ಎಂದಿಗೂ ಜಾತಿ, ವರ್ಣ ಹಾಗೂ ಬ್ರಾಹ್ಮಣ್ಯ ವ್ಯವಸ್ಥೆಯ ವಿರುದ್ಧದ ಪ್ರತಿರೋಧದ ಸಂಕೇತವಾಗಿತ್ತು. ಈಗ ಅದೇ ಶರಣರ ಹೆಸರಿನಲ್ಲಿ 'ಹಿಂದೂ ಸಮಾವೇಶ' ಆಯೋಜಿಸುವುದು ಬಸವ ತತ್ವಗಳ ಅಪಹರಣಕ್ಕೆ ಮಾಡಿದ ಯತ್ನ ಎಂದು ಅವರು ಕಿಡಿಕಾರಿದರು.



ಮಹಾರಾಷ್ಟ್ರದ ಕಾಡಸಿದ್ದೇಶ್ವರ ಮಠದ ಕನ್ನೇರಿ ಸ್ವಾಮೀಜಿಯನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿರುವುದಕ್ಕೂ ತೀವ್ರ ವಿರೋಧ ವ್ಯಕ್ತಪಡಿಸಿದ ಶಟಗಾರ, ಬಸವಾದಿ ಚಿಂತನೆಗಳನ್ನು ಮಸುಕುಗೊಳಿಸಿ, ಸಮಾಜದಲ್ಲಿ ವಿಭಜನೆ ಸೃಷ್ಟಿಸುವ ಉದ್ದೇಶದಿಂದ ಇಂತಹ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಜಿಲ್ಲಾಡಳಿತ ತಕ್ಷಣ ಮಧ್ಯಪ್ರವೇಶಿಸಿ ಸಮಾವೇಶವನ್ನು ತಡೆಹಿಡಿಯಬೇಕು ಎಂದು ಆಗ್ರಹಿಸಿದರು.

ಒಂದು ವೇಳೆ ಸಮಾವೇಶಕ್ಕೆ ಅನುಮತಿ ನೀಡಿದರೆ ರಾಜ್ಯಾದ್ಯಂತ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಜಾಗತಿಕ ಲಿಂಗಾಯತ ಮಹಾಸಭಾ ಮತ್ತು ಸೌಹಾರ್ದ ಕರ್ನಾಟಕವು ಸರ್ಕಾರದ ಮಧ್ಯಪ್ರವೇಶವನ್ನು ಒತ್ತಾಯಿಸಿ ಯಾದಗಿರಿ ಜಿಲ್ಲಾಧಿಕಾರಿ ಮೂಲಕ ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರವನ್ನು ಸಲ್ಲಿಸಿದೆ.

"ಶರಣರ ಹೆಸರಿನಲ್ಲಿ 'ಹಿಂದೂ ಸಮಾವೇಶ' ಆಯೋಜಿಸುವುದು ಅವರ ಪರಂಪರೆಯನ್ನು ಅಗೌರವಿಸುತ್ತದೆ ಮತ್ತು ಅವರ ಸಮಾನತೆ ಮತ್ತು ಪ್ರಗತಿಪರ ಆದರ್ಶಗಳನ್ನು ವಿರೂಪಗೊಳಿಸುವ ಅಪಾಯವಿದೆ ಎಂದು ನಾವು ಹೇಳಿದ್ದೇವೆ.

ಅಂತಹ ಸಮಾವೇಶಕ್ಕೆ ಬಸವ ಶರಣರ ಹೆಸರನ್ನು ಬಳಸುವುದು ಅವರ ಮೂಲಭೂತ ತತ್ವಗಳಿಗೆ ವಿರುದ್ಧವಾಗಿದೆ ಮತ್ತು ಶರಣರ ಚಿಂತನೆಯ ತಪ್ಪಾದ ಪ್ರಾತಿನಿಧ್ಯಕ್ಕೆ ಕಾರಣವಾಗಬಹುದು ಎಂದು ನಾವು ಮನವಿ ಪತ್ರದಲ್ಲಿ ಉಲ್ಲೇಖಿಸದ್ದೇವೆ ಎಂದು ತಿಳಿಸಿದ್ದಾರೆ.

ಬಸವಣ್ಣನವರ ಬೋಧನೆಗಳನ್ನು ನಿರ್ದಿಷ್ಟ ರಾಜಕೀಯ ಅಥವಾ ಧಾರ್ಮಿಕ ಉದ್ದೇಶಗಳಿಗಾಗಿ ಬಳಸಿಕೊಳ್ಳಲು ಉದ್ದೇಶಪೂರ್ವಕ ಪ್ರಯತ್ನ ನಡೆಯುತ್ತಿರುವಂತೆ ತೋರುತ್ತಿದೆ ಎಂದು ಅವರು ಆರೋಪಿಸಿದ್ದಾರೆ ಮತ್ತು ಅವರು ಕೋಮು ಸಾಮರಸ್ಯವನ್ನು ಕಾಪಾಡಲು ಮತ್ತು ಈ ಪ್ರದೇಶದಲ್ಲಿ ಅಶಾಂತಿಯನ್ನು ತಡೆಯಲು ಕ್ರಮ ಕೈಗೊಳ್ಳುವಂತೆ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

# ಕಾರಂತರ ಬದುಕಿನರೀತಿ ಹಿರಿಯ ನಾಗರಿಕರಿಗೆ ಮಾದರಿ



**ಬೆಳಗಾವಿ ವಾರ್ತೆ ಉಡುಪಿ :** ತಮ್ಮ ಬದುಕನ್ನುತಾವೇ ಕಟ್ಟಿಕೊಳ್ಳಬೇಕು ಎಂಬ ಬಾವ ಕಾರಂತರಲ್ಲಿ ಮೂಡಿದಾಗ ಸ್ವಾತಂತ್ರ್ಯ ಹೋರಾಟ ಮತ್ತು ವಿವಿಧ ಸಮಾಜಮುಖಿ ಚಳುವಳಿಯಲ್ಲಿ ಪಾಲ್ಗೊಂಡವರು.

ಚಿಂತನೆಗಳ ಮೂಲಕ ವೈಜ್ಞಾನಿಕತೆಯನ್ನು ಉಳಿಸಿಕೊಂಡ ಅವರು ಇಳಿ ವಯಸ್ಸಿನಲ್ಲಿಯೂ ಬದುಕಿನಲ್ಲಿ ಕುರಿತು ಹೊಂದಿದ್ದಉತ್ಸಾಹ ಕೆಲಸ ನಿಷ್ಠೆ ಹಿರಿಯ ನಾಗರಿಕರಿಗೆ ಮಾದರಿಎಂದುಉದಯವಾಣಿಯ ವಿಶ್ರಾಂತ ಹಿರಿಯಉಪಸಂಪಾದಕ ನಿತ್ಯಾನಂದ ಪಡ್ರೆ ಹೇಳಿದರು.

ಅವರು ಶನಿವಾರ ಬ್ರಹ್ಮಗಿರಿಯ ಭಾರತೀಯರೆಡ್‌ಕ್ರಾಸ್ ಸಂಸ್ಥೆಯಲ್ಲಿ ಕನ್ನಡ ಮತ್ತು ಸಂಸ್ಕೃತಿಇಲಾಖೆಯ ಡಾ.ಶಿವರಾಮ ಕಾರಂತ ಟ್ರಸ್ಟ್ ವತಿಯಿಂದ ಹಿರಿಯ ನಾಗರಿಕರ ಸಂಘ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಉಡುಪಿ ಜಿಲ್ಲೆ ಇವರ ಸಹಯೋಗದಲ್ಲಿ ನಡೆದಕಾರಂತ ಉಪನ್ಯಾಸ ಮತ್ತು ಬಹುಮಾನ ವಿತರಣಾ ಸಮಾರಂಭದಲ್ಲಿ ಕಾರಂತರ ಬದುಕು-ಬರಹಗಳು ಹಿರಿಯ ನಾಗರಿಕರಿಗೆ ಮಾದರಿ ಎಂಬ ವಿಷಯದಕುರಿತುಉಪನ್ಯಾಸ ನೀಡಿ ಮಾತನಾಡಿದರು.

ಕರ್ನಾಟಕ ಭಾರತೀಯರೆಡ್‌ಕ್ರಾಸ್ ಸಂಸ್ಥೆಯ ಸಭಾಪತಿ ಬಸರೂರುರಾಜೀವ ಶೆಟ್ಟಿ, ಚಿಂತಕ ಮುಷ್ತಾಕ್ ಹೆನ್ನಾಬೈಲ್, ಪ್ರಮುಖರಾದ ಸದಾನಂದ ಹೆಗ್ಡೆ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಡಾ.ಶಿವರಾಮ ಕಾರಂತ ಟ್ರಸ್ಟಿನ ಸದಸ್ಯಜಿ.ಎಂ ಶರೀಫ್ ಹೂಡೆ ಸ್ವಾಗತಿಸಿ, ಉಪನ್ಯಾಸಕಿ ಶಾಲಿನಿ ಯು.ಬಿ ನಿರೂಪಿಸಿ ವಂದಿಸಿದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001